ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 162 RNI Number : KNKAN/25/A2770 20-06-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :162 ರಾಯಚೂರು 20-06-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563









ವರ್ಷ ಪೂರೈಸಿದ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ: ಅಭಿವೃದ್ಧಿಯತ್ತ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ

ರಾಯಚೂರು, :★ ಕಲ್ಯಾಣ ಕರ್ನಾಟಕ ಪ್ರದೇಶವು ಐತಿಹಾಸಿಕವಾಗಿ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಹಿಂದುಳಿದ ಪ್ರದೇಶವೆಂದು ಗುರುತಿಸಿಕೊಂಡಿದೆ. ಈ ಭಾಗದ ಜನರ ಬದುಕು ಇನ್ನೂ ಬಡತನದ ಸವಾಲುಗಳನ್ನು ಎದುರಿಸುತ್ತಿದ್ದು, ರಾಜಕೀಯ, ಆರ್ಥಿಕ ಮತ್ತು ಶೈಕ್ಷಣಿಕ ಕ್ಷೇತ್ರಗಳಲ್ಲಿ ಸಮಾನ ಅವಕಾಶಗಳಿಂದ ವಂಚಿತರಾಗಿರುವುದು ಕಂಡುಬರುತ್ತದೆ. ನಿರುದ್ಯೋಗದ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಉನ್ನತ ಶಿಕ್ಷಣದ ಕೊರತೆಯಿಂದಾಗಿ ಅನೇಕ ಯುವಕರು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಅಗತ್ಯವಾದ ವೇದಿಕೆಯನ್ನು ಪಡೆಯಲಾಗದೆ ಸಂಕಷ್ಟ ಅನುಭವಿಸುತ್ತಿದ್ದಾರೆ.



ಈ ಹಿನ್ನೆಲೆಯಲ್ಲಿ ಸರ್ಕಾರವು ಈಗಾಗಲೇ ಗುಲ್ಬರ್ಗ ವಿಶ್ವವಿದ್ಯಾಲಯ ಮತ್ತು ಹಂಪಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿ ಶಿಕ್ಷಣದ ವಿಸ್ತರಣೆಗೆ ಮಹತ್ವದ ಹೆಜ್ಜೆ ಇಟ್ಟಿತ್ತು. ಅದೇ ರೀತಿ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶಗಳನ್ನು ಒದಗಿಸುವ ಉದ್ದೇಶದಿಂದ 2021ರಲ್ಲಿ ರಾಯಚೂರು ನಗರದ ಹೊರವಲಯದ ಯರಗೇರಾ ಗ್ರಾಮದ ಸಮೀಪ ★ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ★ ಸ್ಥಾಪನೆಯಾಯಿತು.

ಕಳೆದ ವರ್ಷ ಜುಲೈ 5ರಂದು ಸರ್ಕಾರವು ವಿಶ್ವವಿದ್ಯಾಲಯದ ಕುಲಪತಿಯಾಗಿ ★ಪ್ರೊ. ಶಿವಾನಂದ ಕೆಳಗಿನಮನಿ★ ಅವರನ್ನು ನೇಮಕ ಮಾಡಿತು. ಇದೀಗ ಅವರು ಒಂದು ವರ್ಷದ ಆಡಳಿತಾವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ಈ ಅವಧಿಯಲ್ಲಿ ವಿಶ್ವವಿದ್ಯಾಲಯದ ಸರ್ವಾಂಗೀಣ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳು ಶಿಕ್ಷಣ ವಲಯದಲ್ಲಿ ವ್ಯಾಪಕ ಮೆಚ್ಚುಗೆಗೆ ಪಾತ್ರವಾಗಿವೆ.

ವಿಶ್ವವಿದ್ಯಾಲಯದ ಅಭಿವೃದ್ಧಿಯನ್ನು ಕೇವಲ ಕಟ್ಟಡಗಳು ಅಥವಾ ಭೌತಿಕ ಸೌಕರ್ಯಗಳ ಆಧಾರದ ಮೇಲೆ ಅಳೆಯಲು ಸಾಧ್ಯವಿಲ್ಲ. ಬೋಧನೆ, ಸಂಶೋಧನೆ, ಆಡಳಿತಾತ್ಮಕ ದಕ್ಷತೆ ಹಾಗೂ ಸಮಾಜಮುಖಿ ಸೇವೆಗಳ ಸಮನ್ವಯವೇ ನಿಜವಾದ ಅಭಿವೃದ್ಧಿಯ ಮಾನದಂಡವಾಗಿದೆ. ಈ ನಿಟ್ಟಿನಲ್ಲಿ ಕುಲಪತಿ ಪ್ರೊ. ಶಿವಾನಂದ ಕೆಳಗಿನಮನಿ ಅವರು ಆಡಳಿತಾತ್ಮಕ, ಶೈಕ್ಷಣಿಕ ಹಾಗೂ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಗಮನಾರ್ಹ ಸುಧಾರಣೆಗಳನ್ನು ಜಾರಿಗೆ ತಂದಿದ್ದಾರೆ.

ಸುಸ್ಥಿರ ಆಡಳಿತ ಮತ್ತು ಪರಿಣಾಮಕಾರಿ ಕಾರ್ಯನಿರ್ವಹಣೆಯನ್ನು ಖಚಿತಪಡಿಸುವ ಉದ್ದೇಶದಿಂದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯನ್ನು ಶೈಕ್ಷಣಿಕ, ಪರೀಕ್ಷಾ, ಹಣಕಾಸು ಸೇರಿದಂತೆ ಒಟ್ಟು ★18 ಪ್ರತ್ಯೇಕ ವಿಭಾಗಗಳಾಗಿ ಪುನರ್‌ರಚಿಸಲಾಗಿದೆ★. ಇದರಿಂದ ಆಡಳಿತದಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯ ವ್ಯವಸ್ಥೆ ಬಲಗೊಂಡಿದೆ.

ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಿರಂತರ ತರಗತಿಗಳನ್ನು ಬೆಳಗ್ಗೆಯಿಂದ ಸಂಜೆವರೆಗೆ ನಡೆಸಲಾಗುತ್ತಿದ್ದು, ವಿದ್ಯಾರ್ಥಿಗಳ ಹಾಜರಾತಿ ಶೇಕಡಾ 80ಕ್ಕಿಂತ ಹೆಚ್ಚಾಗಿದೆ. ವಿದ್ಯಾರ್ಥಿಗಳ ಭವಿಷ್ಯವನ್ನು ಉದ್ಯೋಗಮುಖಿಯಾಗಿಸಲು ★ ಅನುಮೋದನೆಯೊಂದಿಗೆ, , ಹಾಗೂ ★ ಸೇರಿದಂತೆ ಹಲವು ವೃತ್ತಿಪರ ಕೋರ್ಸ್‌ಗಳನ್ನು ಆರಂಭಿಸುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.

ಸಂಶೋಧನಾ ಕ್ಷೇತ್ರದಲ್ಲಿಯೂ ವಿಶ್ವವಿದ್ಯಾಲಯವು ಮಹತ್ವದ ಹೆಜ್ಜೆ ಇಟ್ಟಿದೆ. ಕನ್ನಡ, ಮೈಕ್ರೋಬಯಾಲಜಿ, ಭೌತಶಾಸ್ತ್ರ ಹಾಗೂ ರಾಜ್ಯಶಾಸ್ತ್ರ ವಿಭಾಗಗಳಲ್ಲಿ ಆರು ಪರಿಣತ ಮಾರ್ಗದರ್ಶಕರ ನೇತೃತ್ವದಲ್ಲಿ ★.. ಸಂಶೋಧನಾ ಕಾರ್ಯಕ್ರಮಗಳನ್ನು ಆರಂಭಿಸಲಾಗಿದೆ. ಜೊತೆಗೆ ಅನುವಂಶಿಕ ಕಾಯಿಲೆಗಳು, ರಕ್ತಹೀನತೆ ಹಾಗೂ ಅಪೌಷ್ಟಿಕತೆಯ ಕುರಿತು ಸಂಶೋಧನೆ ನಡೆಸಲು ಅತ್ಯಾಧುನಿಕ ★★ಜೀನೋಮ್ ಸೆಂಟರ್ ಸ್ಥಾಪಿಸಲಾಗಿದೆ.



ಸುಮಾರು ★250 ಎಕರೆ ವಿಸ್ತೀರ್ಣದ ಕ್ಯಾಂಪಸ್★ ಹೊಂದಿರುವ ವಿಶ್ವವಿದ್ಯಾಲಯದಲ್ಲಿ ಶಾಸಕರ ಅನುದಾನದ ನೆರವಿನಿಂದ ಲೋಕೋಪಯೋಗಿ ಇಲಾಖೆಯ ಮೂಲಕ ಸಿಸಿ ರಸ್ತೆಗಳ ನಿರ್ಮಾಣ ಹಾಗೂ ಸುಂದರವಾದ ★ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ತಪೋವನ ಉದ್ಯಾನವನ★ ಅಭಿವೃದ್ಧಿಪಡಿಸಲಾಗಿದೆ.

ವಿದ್ಯಾರ್ಥಿಗಳ ಸೌಲಭ್ಯಗಳನ್ನು ವಿಸ್ತರಿಸುವ ನಿಟ್ಟಿನಲ್ಲಿ ★ಎಸ್‌ಸಿ, ಎಸ್‌ಟಿ, ಅಲ್ಪಸಂಖ್ಯಾತ ಮತ್ತು ಮಹಿಳಾ ವಿದ್ಯಾರ್ಥಿಗಳಿಗಾಗಿ ನಾಲ್ಕು ಹೊಸ ವಸತಿ ನಿಲಯಗಳು★ ಮಂಜೂರಾಗಿವೆ. ಎರಡು ಕೋಟಿ ರೂಪಾಯಿ ವೆಚ್ಚದಲ್ಲಿ ಅತಿಥಿ ಗೃಹ ನಿರ್ಮಾಣ ಹಾಗೂ ★24ಗ7 ಡಿಜಿಟಲ್ ಗ್ರಂಥಾಲಯ★ ಯೋಜನೆಯೂ ಅನುಷ್ಠಾನದ ಹಂತದಲ್ಲಿದೆ.

ವಿಶ್ವವಿದ್ಯಾಲಯದ ಪ್ರಗತಿಯನ್ನು ಅದು ಸಮಾಜದ ಮೇಲೆ ಬೀರುವ ಪರಿಣಾಮದ ಮೂಲಕವೂ ಅಳೆಯಲಾಗುತ್ತದೆ. ಈ ದೃಷ್ಟಿಯಿಂದ ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆಯೊಂದಿಗೆ ಕೈಜೋಡಿಸಿ ಉದ್ಯೋಗ ಮೇಳಗಳು, ಉದ್ಯೋಗಾವಕಾಶ ವೃದ್ಧಿ ಕಾರ್ಯಕ್ರಮಗಳು, ಕುಷ್ಠರೋಗ ಜಾಗೃತಿ ಅಭಿಯಾನಗಳು ಹಾಗೂ ಪರಿಸರ ದಿನಾಚರಣೆ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ವಿದ್ಯಾರ್ಥಿಗಳಲ್ಲಿ ಕ್ರೀಡಾ ಸ್ಫೂರ್ತಿಯನ್ನು ಬೆಳೆಸಲು ★ಸಿಂಥೆಟಿಕ್ ಕ್ರೀಡಾಂಗಣ★ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ಗೆಲ್ಲುವ ವಿದ್ಯಾರ್ಥಿಗಳಿಗೆ ★ಒಂದು ಲಕ್ಷದಿಂದ ಐದು ಲಕ್ಷ ರೂಪಾಯಿವರೆಗೆ ನಗದು ಬಹುಮಾನ★ ಘೋಷಿಸಿರುವುದು ಗಮನಾರ್ಹ ಬೆಳವಣಿಗೆಯಾಗಿದೆ.

ಮೂಲತಃ ಶಿವಮೊಗ್ಗ ಜಿಲ್ಲೆಯ ಮಲೆನಾಡಿನ ಭಾಗದವರಾದ ಪ್ರೊ. ಶಿವಾನಂದ ಬಿ. ಕೆಳಗಿನಮನಿ ಅವರು ಬಿಸಿಲುನಾಡಾದ ರಾಯಚೂರು ಭಾಗದ ಶಿಕ್ಷಣಾಭಿವೃದ್ಧಿಯ ಬಗ್ಗೆ ಅಪಾರ ಕಾಳಜಿ ವಹಿಸಿಕೊಂಡು, ತಮ್ಮ ಆಡಳಿತಾವಧಿಯನ್ನು ಸಂಪೂರ್ಣವಾಗಿ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಮೀಸಲಿಟ್ಟಿದ್ದಾರೆ.

ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಪದವಿ ಕಾಲೇಜುಗಳು ಈಗ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಅಧೀನಕ್ಕೆ ಬಂದಿವೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಸಂಸ್ಥೆಗಳು ನಿಯಮಾನುಸಾರವಾಗಿ ಮತ್ತು ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಕಾರ್ಯನಿರ್ವಹಿಸುವಂತೆ ಅವರು ಸ್ಪಷ್ಟ ನಿರ್ದೇಶನ ನೀಡಿದ್ದಾರೆ.

ದಕ್ಷ, ನಿಷ್ಪಕ್ಷಪಾತ ಮತ್ತು ಶಿಸ್ತಿನ ಆಡಳಿತದ ಮೂಲಕ ವಿಶ್ವವಿದ್ಯಾಲಯಕ್ಕೆ ಹೊಸ ದಿಕ್ಕು ನೀಡುತ್ತಿರುವ ಕುಲಪತಿಗಳು, ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರವಹಿಸಿದ್ದಾರೆ. ನೇರ ನುಡಿ, ನಿಷ್ಠೆ ಮತ್ತು ಪಾರದರ್ಶಕ ಆಡಳಿತ ಶೈಲಿಯ ಮೂಲಕ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಒಂದು ವರ್ಷದ ಅವಧಿಯಲ್ಲಿ ಆಡಳಿತ, ಶಿಕ್ಷಣ, ಸಂಶೋಧನೆ, ಮೂಲಸೌಕರ್ಯ ಮತ್ತು ಸಮಾಜಮುಖಿ ಸೇವೆಗಳಲ್ಲಿ ಸಾಧಿಸಿರುವ ಪ್ರಗತಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಅಭಿವೃದ್ಧಿಯ ಮೈಲುಗಲ್ಲಾಗಿ ದಾಖಲಾಗಿದ್ದು, ಕುಲಪತಿ ಪ್ರೊ. ಶಿವಾನಂದ ಬಿ. ಕೆಳಗಿನಮನಿ ಅವರ ಸಾಧನೆಗೆ ಈ ಅಭಿವೃದ್ಧಿಯೇ ಸಾಕ್ಷಿಯಾಗಿದೆ.

ಮಾದರಿಯ ಶುದ್ಧ ಮತದಾರರ ಪಟ್ಟಿ ತಯಾರಿಸುವುದೇ ಎಸ್‌ಐಆರ್ ಕಾರ್ಯಕ್ರಮ: ಡಾ. ಹಂಪಣ್ಣ ಸಜ್ಜನ್

ರಾಯಚೂರು, ಜೂ. 19:

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ಪ್ರತಿಯೊಬ್ಬ ನಾಗರಿಕರೂ ಭಾಗವಹಿಸಿ ತಮ್ಮ ಮತದಾನದ ಹಕ್ಕನ್ನು ಭದ್ರಪಡಿಸಿಕೊಳ್ಳಬೇಕು ಎಂದು ರಾಯಚೂರಿನ ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ್ ಕರೆ ನೀಡಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ತಾಲೂಕು ಆಡಳಿತ, ತಾಲೂಕು ಪಂಚಾಯತ್ ಹಾಗೂ ಸ್ವೀಪ್ ಸಮಿತಿ ಸಂಯುಕ್ತ ಆಶ್ರಯದಲ್ಲಿ ದಿನಾಂಕ 18-06-2026 ರಂದು ಆಯೋಜಿಸಲಾದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಜಾಥಾಕ್ಕೆ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯ ಹಾಗೂ ದೇಶದ ವಿವಿಧ ಭಾಗಗಳಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಈಗಾಗಲೇ ಬಿಎಲ್‌ಒ ಅಧಿಕಾರಿಗಳು ನಿರಂತರವಾಗಿ ಮ್ಯಾಪಿಂಗ್ ಕಾರ್ಯ ನಡೆಸುತ್ತಿದ್ದಾರೆ. ಮತದಾರರ ಹೆಸರು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ದಾಖಲಾಗಿರುವುದು ಕಾನೂನುಬಾಹಿರವಾಗಿದ್ದು, ಪ್ರತಿಯೊಬ್ಬರೂ

ತಿನ್ನೇ ಪುಟ.....

ಕ್ಷೇತ್ರದ ಅಭಿವೃದ್ಧಿಯೇ ನಮ್ಮ ಸಂಕಲ್ಪ, ಜನಸೇವೆಯೇ ನಮ್ಮ ಧ್ಯೇಯ

ರಾಯಚೂರು, ಜೂ.19-

ರಾಯಚೂರು ಗ್ರಾಮೀಣ ಕ್ಷೇತ್ರದ ಜನಪ್ರಿಯ ಶಾಸಕರು ಕರ್ನಾಟಕ ಶ್ರೀ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ರವರು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ಹಾಗೂ ಉದ್ಘಾಟನೆ ನೆರವೇರಿಸಿದರು.

ಆಶಾಪೂರ ಗ್ರಾಮದಲ್ಲಿ KKRDB ಮೈಕ್ರೋ ಯೋಜನೆಯಡಿ ನಿರ್ಮಿಸಲಾದ ಸ. ಹಿ. ಶಾಲೆಯ 2 ಕೊಠಡಿಗಳ ಉದ್ಘಾಟನೆ ಇಲಾಖೆ - PWD ಉಡ'ಮ'ಗ'ಲ್ ಖಾನಾಪೂರ ಗ್ರಾಮದಲ್ಲಿ KKRDB ಯೋಜನೆಯಡಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಕಟ್ಟಡ



ನಿರ್ಮಾಣ ಕಾಮಗಾರಿ ಭೂಮಿ ಪೂಜೆ, ಇಲಾಖೆ ಅನುದಾನ 3 ಕೋಟಿ ರೂ ಗಾರಲದಿನ್ನಿ ಗ್ರಾಮದಲ್ಲಿ KKRDB ಮೈಕ್ರೋ ಯೋಜನೆಯಡಿ ನಿರ್ಮಿಸಲಾದ ಸ. ಪೌ. ಶಾಲೆಯ ನೂತನ ಕಟ್ಟಡ ಉದ್ಘಾಟನೆ ಇಲಾಖೆ PWD 2 ಕೋಟಿ 66 ಲಕ್ಷ ರೂ ಶ್ರೀ

ತಿನ್ನೇ ಪುಟ.....



ಹಲ್ಲೆ, ವಿಡಿಯೋ ವೈರಲ್ ಸಂಚು ಆರೋಪ: ಜಿಲ್ಲಾಧಿಕಾರಿಗೆ ದಲಿತ ಸಂಘರ್ಷ ಸಮಿತಿ ಮನವಿ

ರಾಯಚೂರು, ಜೂ.19-

ದಲಿತ ಸಂಘರ್ಷ ಸಮಿತಿ ಜಿಲ್ಲಾ ಮುಖಂಡ ಹಾಗೂ ಸಾಮಾಜಿಕ ಹೋರಾಟಗಾರ ರಾಜು ಬೊಮ್ಮನಾಳ ಅವರ ಮೇಲೆ ನಡೆದಿರುವ ಎನ್ನಲಾದ ದಾಳಿ ಪ್ರಕರಣಕ್ಕೆ ಹೊಸ ತಿರುವು ದೊರೆತಿದ್ದು, ಇದು ಸಾಮಾನ್ಯ ಹಲ್ಲೆಯಲ್ಲ, ಪೂರ್ವನಿಯೋಜಿತ ಸಂಚು ಎಂಬ ಗಂಭೀರ ಆರೋಪ ಕೇಳಿಬಂದಿದೆ. ಪ್ರಕರಣದ ಸಂಪೂರ್ಣ ತನಿಖೆ ನಡೆಸಿ ಘಟನೆಯ ಹಿಂದಿರುವವರನ್ನು ಪತ್ತೆ ಹಚ್ಚಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ.) ಜಿಲ್ಲಾ ಸಮಿತಿ ಜಿಲ್ಲಾ ಡಳಿತವನ್ನು ಒತ್ತಾಯಿಸಿದೆ.

ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಮೇ 21ರಂದು ರಾಯಚೂರಿನ ಕೇಂದ್ರ ಬಸ್ ನಿಲ್ದಾಣದಲ್ಲಿ ರಾಜು ಬೊಮ್ಮನಾಳ ಅವರ ಮೇಲೆ ಕೆಲವರು ಕಣ್ಣಿಗೆ ಖಾರದ ಪುಡಿ ಎರಚಿ ಸಾರ್ವಜನಿಕವಾಗಿ ಹಲ್ಲೆ ನಡೆಸಿರುವುದಾಗಿ ಆರೋಪಿಸಲಾಗಿದೆ. ಮಹಿಳೆಯೊಬ್ಬರನ್ನು ಮುಂಚೂಣಿಗೆ ತಂದು ಘಟನೆ ನಡೆಸಲಾಗಿದ್ದು, ಪೂರ್ವಯೋಜಿತವಾಗಿ ಚಿತ್ರೀಕರಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ವ್ಯಕ್ತಿತ್ವ

ತಿನ್ನೇ ಪುಟ.....

ಪಾರ್ವತಮ್ಮ ನಿಧನಕ್ಕೆ ಶ್ರದ್ಧಾಂಜಲಿ: ಪಾಪಾರೆಡ್ಡಿ ಜನಪ್ರಿಯತೆಯ ಹಿಂದೆ ಅವರೇ ದೊಡ್ಡ ಶಕ್ತಿ - ಶಂಕ್ರಪ್ಪ

ರಾಯಚೂರು, ಜೂ.19-

ಮುನ್ನೂರು ಕಾಪು ಸಮಾಜದ ಹಿರಿಯ ಮುಖಂಡರು ಹಾಗೂ ಮಾಜಿ ಶಾಸಕ ಎ. ಪಾಪಾರೆಡ್ಡಿ ಅವರ ಧರ್ಮಪತ್ನಿ ಪಾರ್ವತಮ್ಮ ಅವರ ನಿಧನಕ್ಕೆ ನಗರದ ವೀರಾಂಜನೇಯ ಕಲ್ಯಾಣ ಮಂಟಪದಲ್ಲಿ ಶ್ರದ್ಧಾಂಜಲಿ ಸಭೆ ನಡೆಯಿತು. ಸಮಾಜದ ಮುಖಂಡರು, ವಿವಿಧ ರಾಜಕೀಯ ಪಕ್ಷಗಳ ನಾಯಕರು ಹಾಗೂ ಗಣ್ಯರು ಭಾಗವಹಿಸಿ ಪುಷ್ಪ ನಮನ ಸಲ್ಲಿಸಿ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡ ಎನ್. ಶಂಕ್ರಪ್ಪ, ಪಾರ್ವತಮ್ಮ ಅವರ ಅಗಲಿಕೆ ಮುನ್ನೂರು ಕಾಪು ಸಮಾಜಕ್ಕೆ ದೊಡ್ಡ ನಷ್ಟವಾಗಿದೆ ಎಂದರು. ಅವರ ಸರಳತೆ, ಮೃದುವಾದ ವ್ಯಕ್ತಿತ್ವ ಮತ್ತು ಎಲ್ಲರೊಂದಿಗೆ ಬೆರೆತು ಬದುಕುವ ಗುಣ ಸಮಾಜಕ್ಕೆ ಆದರ್ಶವಾಗಿತ್ತು ಎಂದು ಹೇಳಿದರು.



ಕಳೆದ ಹಲವು ದಶಕಗಳಿಂದ ಪಾಪಾರೆಡ್ಡಿ ಅವರೊಂದಿಗೆ ಒಡನಾಟ ಹೊಂದಿದ್ದಾಗಿ ಹೇಳಿದ ಅವರು, ಪಾಪಾರೆಡ್ಡಿ ಅವರ ರಾಜಕೀಯ ಯಶಸ್ಸು ಹಾಗೂ ಜನಪ್ರಿಯತೆಯ ಹಿಂದೆ ಪಾರ್ವತಮ್ಮ ಅವರು ಮೌನ ಶಕ್ತಿಯಾಗಿ ನಿಂತಿದ್ದರು ಎಂದು ಸ್ಮರಿಸಿದರು. ಕುಟುಂಬದ ಬೆಂಬಲ, ಪರಸ್ಪರ ಗೌರವ ಮತ್ತು ಸಕಾರಾತ್ಮಕ ಚಿಂತನೆಯಿಂದ ಇಬ್ಬರೂ ಆದರ್ಶ ದಾಂಪತ್ಯ ಜೀವನ ನಡೆಸಿದ್ದರು ಎಂದು ಹೇಳಿದರು. ಕಾಂಗ್ರೆಸ್ ಮುಖಂಡ ಶಾಂತಪ್ಪ ಮಾತನಾಡಿ, ಪಾರ್ವತಮ್ಮ ಅವರ ಶಿಸ್ತುಬದ್ಧ ಜೀವನ, ಸರಳ ನಡೆ ಹಾಗೂ ಕುಟುಂಬದ ಮೇಲಿನ ಬದ್ಧತೆ ಎಲ್ಲರಿಗೂ ಮಾದರಿಯಾಗಿದೆ ಎಂದರು. ಪಾಪಾರೆಡ್ಡಿ ಅವರ ಜೀವನದ ಹಲವು ಹಂತಗಳಲ್ಲಿ ಪಾರ್ವತಮ್ಮ ಅವರ ಪಾತ್ರ ಮಹತ್ವದ್ದಾಗಿದ್ದು, ಅವರ ಅಗಲಿಕೆ ತುಂಬಲಾರದ ನೋವು ತಂದಿದೆ ಎಂದು ಹೇಳಿದರು.

ಸಭೆಯಲ್ಲಿ ಪಾರ್ವತಮ್ಮ ಅವರ ಆತ್ಮಕ್ಕೆ ಶಾಂತಿ ಕೋರಿ ಎರಡು ನಿಮಿಷ ಮೌನಾಚರಣೆ ನಡೆಸಲಾಯಿತು. ನಂತರ ವಿವಿಧ ಸಮಾಜದ ಮುಖಂಡರು ಅವರ ವ್ಯಕ್ತಿತ್ವ, ಸೇವಾ

ತಿನ್ನೇ ಪುಟ.....

ಬಳ್ಳಾರಿ: ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಸ್ವೀಪ್ ಚಟುವಟಿಕೆ ಕಡ್ಡಾಯ

ಎಲೆಕ್ಟೋರಲ್ ಲಿಟರಸಿ ಕ್ಲಬ್ ಸಕ್ರಿಯಗೊಳಿಸುವಂತೆ ಜಿಪಂ ಸಿಇಒ ಸೂಚನೆ



ಬಳ್ಳಾರಿ,ಜೂ.19

ಜಿಲ್ಲೆಯ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳು, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಸ್ಥಾಪಿಸಲಾಗಿರುವ ಎಲೆಕ್ಟೋರಲ್ ಲಿಟರಸಿ ಕ್ಲಬ್ ಗಳ ಮೂಲಕ ಕಡ್ಡಾಯವಾಗಿ ಸ್ವೀಪ್ ಚಟುವಟಿಕೆಗಳನ್ನು ಆಯೋಜಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಎಲೆಕ್ಟೋರಲ್ ಲಿಟರಸಿ ಕ್ಲಬ್ ಗಳ ಮೂಲಕ ಸ್ವೀಪ್ ಚಟುವಟಿಕೆ ಆಯೋಜಿಸುವ ಕುರಿತು ನಗರದ ಜಿಲ್ಲಾ ಪಂಚಾಯತ್ ನ ಹಳೆಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಯುವ ಜನತೆಯಲ್ಲಿ, ವಿಶೇಷವಾಗಿ ಪ್ರಥಮ ಬಾರಿಗೆ ಮತದಾನ ಮಾಡುವವರಲ್ಲಿ (18 ವರ್ಷ ತುಂಬಲಿರುವ ವಿದ್ಯಾರ್ಥಿಗಳಲ್ಲಿ) ಚುನಾವಣಾ ಸಾಕ್ಷರತೆಯನ್ನು ಮೂಡಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಕಾಲೇಜು ಮತ್ತು ವಿಶ್ವವಿದ್ಯಾಲಯ ಹಂತದಲ್ಲಿ ವಿದ್ಯಾರ್ಥಿಗಳನ್ನು ಕೇವಲ ಶೈಕ್ಷಣಿಕವಾಗಿ ಮಾತ್ರವಲ್ಲದೆ, ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಲು ಈ ಕ್ಲಬ್‌ಗಳು ನೆರವಾಗಲಿವೆ ಎಂದು ತಿಳಿಸಿದರು.

ಮುಂದಿನ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ಮಹತ್ವದ ಕ್ರಮ ಕೈಗೊಳ್ಳಲಾಗಿದೆ. ಇದು ಭಾರತೀಯ ಚುನಾವಣಾ ಆಯೋಗದ ಅತ್ಯಂತ ಪ್ರಮುಖ ಕಾರ್ಯಕ್ರಮವಾಗಿದ್ದು, ಮತದಾರರ ಶಿಕ್ಷಣ, ಮತದಾನದ ಜಾಗೃತಿ ಮೂಡಿಸುವುದು ಮತ್ತು ತನ್ಮೂಲಕ ದೇಶದಲ್ಲಿ ಸಾಕ್ಷರತಾ ಮತದಾನವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದರು.

18 ವರ್ಷ ತುಂಬಿದ ಅಥವಾ ತುಂಬಲಿರುವ ಪ್ರತಿಯೊಬ್ಬ ವಿದ್ಯಾರ್ಥಿಯ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ವಿಶೇಷ ನೋಂದಣಿ ಡ್ರೈವ್‌ಗಳನ್ನು ನಡೆಸುವುದು. ಮತದಾನದ ಮಹತ್ವ ಸಾರುವ ಪ್ರಬಂಧ ಸ್ಪರ್ಧೆ, ಭಾಷಣ, ಚಿತ್ರಕಲೆ, ರಂಗೋಲಿ ಹಾಗೂ ಬೀದಿ ನಾಟಕಗಳನ್ನು ಆಯೋಜಿಸುವುದು. ವಿದ್ಯಾರ್ಥಿಗಳ ಮೂಲಕ ಅವರ ಪೋಷಕರು ಹಾಗೂ ಸುತ್ತಮುತ್ತಲಿನ ಸಾರ್ವಜನಿಕರಲ್ಲಿ ಮತದಾನದ ಜಾಗೃತಿ ಮೂಡಿಸುವುದು ಇಎಲ್‌ಸಿ ಸಂಯೋಜಕರ ಚಟುವಟಿಕೆಗಳಾಗಿವೆ ಎಂದು ಅವರು ತಿಳಿಸಿದರು.

ಹಾಗಾಗಿ ಎಲ್ಲಾ ಖಾಸಗಿ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಲ್ಲಿ ಇಎಲ್‌ಸಿ ಕ್ಲಬ್‌ಗಳು ಸಕ್ರಿಯವಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಈ ಚಟುವಟಿಕೆಗಳ ಪ್ರಗತಿಯನ್ನು ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕಾಲೇಜು ಶಿಕ್ಷಣ ಇಲಾಖೆಯ ಅಧಿಕಾರಿಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸಲಿದ್ದಾರೆ ಎಂದು ಹೇಳಿದರು.

ಜಿಲ್ಲಾದ್ಯಂತ ಈ ತಿಂಗಳ 22 ರಂದು ಹಬ್ಬದ ವಾತಾವರಣದಲ್ಲಿ ವಿಶೇಷ ಗ್ರಾಮ ಸಭೆ'ಯನ್ನು ಆಯೋಜಿಸಲಾಗುತ್ತಿದ್ದು, ಅಂದು ಎಲ್ಲಾ ಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಮತದಾರರ ಸಾಕ್ಷರತಾ ಕ್ಲಬ್‌ಗಳ ವತಿಯಿಂದ ಎಸ್‌ಐಆರ್ ಕುರಿತು ವಿಶೇಷ ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು. ಅಂದು ಕನಿಷ್ಠ ಒಂದು ಗಂಟೆಯ ಅವಧಿಗೆ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಹಾಜರಿದ್ದು, ಎಸ್‌ಐಆರ್ ಪ್ರಕ್ರಿಯೆಯ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಳ್ಳಬೇಕು ಎಂದು ಸೂಚಿಸಿದರು. ಈ ವಿಶೇಷ ಅಭಿಯಾನದ ಮೂಲಕ ಎಸ್‌ಎಸ್‌ಐಆರ್ ಪಟ್ಟಿಯಲ್ಲಿ ಒಬ್ಬನೇ ಒಬ್ಬ ಯುವ ಮತದಾರ ಅಥವಾ ಅನಕ್ಷರಸ್ಥ ಕುಟುಂಬದ ಸದಸ್ಯನ ಹೆಸರು ಸೇರ್ಪಡೆಯಾದರೂ, ಅಥವಾ ಅನಗತ್ಯ ಹೆಸರುಗಳನ್ನು ಕೈಬಿಟ್ಟರೂ ಅದು ಈ ಕಾರ್ಯಕ್ರಮದ ಬಹುದೊಡ್ಡ ಯಶಸ್ಸು ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರ ಶಿವಲಿಂಗ ರೆಡ್ಡಿ ಅವರು ಮಾತನಾಡಿ, ರಾಜ್ಯದಲ್ಲಿ ಹೊಸ ಮತದಾರರ ಪಟ್ಟಿ ಸಿದ್ಧಪಡಿಸುವ ನಿಟ್ಟಿನಲ್ಲಿ ಮಹತ್ವದ ಎಸ್‌ಐಆರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈ ಹಿಂದೆ ಕೇವಲ ಮತದಾರರ ಪಟ್ಟಿ ನವೀಕರಣ, ಹೆಸರು ತೆಗೆದುಹಾಕುವುದು ಹಾಗೂ ಸ್ಥಳಾಂತರದಂತಹ ಅಪ್‌ಡೇಶನ್‌ಗಳಿಗಾಗಿ ಎಸ್‌ಎಸ್‌ಆರ್ ಪ್ರಕ್ರಿಯೆ ನಡೆಸಲಾಗುತ್ತಿತ್ತು. ಆದರೆ, ಪ್ರಸ್ತುತ ಜಾರಿಯಲ್ಲಿರುವ ಎಸ್‌ಐಆರ್ ಪ್ರಕ್ರಿಯೆಯು ಸಂಪೂರ್ಣವಾಗಿ ಹೊಸ ಮತದಾರರ ಪಟ್ಟಿಯನ್ನು ತಯಾರಿಸುವ ಉದ್ದೇಶವನ್ನು ಹೊಂದಿದೆ. ಈ ಹಿನ್ನೆಲೆಯಲ್ಲಿ ಇಎಲ್‌ಸಿ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಶಾಲಾ-ಕಾಲೇಜುಗಳ ಅಧಿಕಾರಿಗಳು ಕೈಜೋಡಿಸಬೇಕು ಎಂದು ಹೇಳಿದರು.

ಹೊಸ ಮತದಾರರ ಪಟ್ಟಿ ತಯಾರಿಕೆಗೆ 2025 ರ ವೋಟರ್ ಲಿಸ್ಟ್ ಅನ್ನು ಆಧಾರವಾಗಿಟ್ಟುಕೊಂಡು ಪ್ರೀ-ಪ್ರಿಂಟೆಡ್ ಫಾರ್ಮ್ಗಳನ್ನು ಸಿದ್ಧಪಡಿಸಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು ಶೀಘ್ರದಲ್ಲೇ ಮನೆ ಮನೆಗೆ ಭೇಟಿ ನೀಡುವರು. ಬಿಎಲ್‌ಒಗಳು ಪ್ರತಿ ಮತದಾರರಿಗೆ ಎರಡು ಪ್ರತಿಗಳಿರುವ ಎನ್ಯೂಮರೇಷನ್ ಫಾರ್ಮ್ ನೀಡಲಿದ್ದಾರೆ. ಸಾರ್ವಜನಿಕರು ಒಂದನ್ನು ಭರ್ತಿ ಮಾಡಿ ಬಿಎಲ್‌ಒಗೆ ನೀಡಬೇಕು ಹಾಗೂ ಮತ್ತೊಂದು ಪ್ರತಿಯಲ್ಲಿ ಬಿಎಲ್‌ಒ ಅವರಿಂದ ಸಹಿ ಪಡೆದು ಸ್ವೀಕೃತಿ ಇಟ್ಟುಕೊಳ್ಳಬೇಕು ಎಂದು ವಿವರಿಸಿದರು.

ಇನ್ನೋರ್ವ ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರ ಅಕ್ಕಿ ಮಲ್ಲಿಕಾರ್ಜುನ ಅವರು ಮಾತನಾಡಿ, 2002 ರ ಹಳೆಯ ಫೋಟೋಗಳ ಬದಲಾಗಿ ಪ್ರಸ್ತುತ ಪಟ್ಟಿಗಾಗಿ ಸಾರ್ವಜನಿಕರು ತಮ್ಮ ಹೊಸ ಭಾವಚಿತ್ರವನ್ನು ಸಿದ್ಧವಾಗಿಟ್ಟುಕೊಂಡು ಬಿಎಲ್‌ಒಗಳಿಗೆ ನೀಡಬೇಕು. ಈ ಪ್ರೀ-ಪ್ರಿಂಟೆಡ್ ಫಾರ್ಮ್ಗಳು ಕ್ಯೂಆರ್ ಕೋಡ್ ಒಳಗೊಂಡಿದ್ದು, ಅತ್ಯಂತ ಗೌಪ್ಯವಾಗಿವೆ. ಇವುಗಳನ್ನು ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಪ್ರದರ್ಶಿಸುವಂತಿಲ್ಲ ಹಾಗೂ ಹೊರಗಡೆ ಕೊಂಡೊಯ್ಯುವತಿಲ್ಲ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಕಸ್ತೂರಿ, ಜಿಲ್ಲಾ ಪಂಚಾಯತ್ ನ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ ಸೇರಿದಂತೆ ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳು, ಪದವಿ ಪೂರ್ವ ಮತ್ತು ಪದವಿ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಜಿಲ್ಲಾ ಪಂಚಾಯತ್ ನ ಪ್ರಥಮ ದರ್ಜೆ ಸಹಾಯಕ ಸುಹೇಲ್ ಸ್ವಾಗತಿಸಿದರು. ವಿಜಯ್ ಕುಮಾರ್ ವಂದಿಸಿದರು.



ವಿವಿಧ ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆ: ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್

ಬಳ್ಳಾರಿ,ಜೂ.19-

ಜಿಲ್ಲಾಡಳಿತದಿಂದ ವಿವಿಧ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು. ಇದಕ್ಕೆ ಬೇಕಾದ ಎಲ್ಲಾ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇ.ಎನ್ ಅವರು ಹೇಳಿದರು.

ವಿವಿಧ ಮಹನೀಯರ ಜಯಂತಿಗಳ ಆಚರಣೆ ಕುರಿತು ಅಪರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಕೇಂದ್ರದಲ್ಲಿ ಜೂ.27 ರಂದು ಕೆಂಪೇಗೌಡ ಜಯಂತಿ ಮತ್ತು ಜುಲೈ 02 ರಂದು ಡಾ.ಫ.ಗು.ಹಳಕಟ್ಟಿಯವರ ಜನ್ಮದಿನ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ನಿರ್ಧಾರ ಕೈಗೊಳ್ಳಲಾಯಿತು.

ಇಬ್ಬರೂ ಮಹನೀಯರ ಜಯಂತಿ ಕಾರ್ಯಕ್ರಮಗಳನ್ನು ನಗರದ ಸಾಂಸ್ಕೃತಿಕ ಸಮುಚ್ಛಯದ ಹೊಂಗಿರಣ ಸಭಾಂಗಣದಲ್ಲಿ ಆಯೋಜಿಸಲಾಗುವುದು. ಮಹನೀಯರ ಸಾಧನೆ ಮತ್ತು ಕಾರ್ಯಗಳ ಬಗ್ಗೆ ಬಿತ್ತರಿಸಲು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಆಯೋಸಬೇಕು. ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘ-ಸಸ್ಥೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ನಿಷ್ಠಿ ರುದ್ರಪ್ಪ, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ವಿಜಯನಗರ ಕಾಲೋನಿಯಲ್ಲಿ ಮಕ್ಕಳ ಹಕ್ಕುಗಳು, ಕಾನೂನು ಸುರಕ್ಷತೆಯ ಜಾಗೃತಿ



ಕೊಪ್ಪಳ ಜೂ.19-

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದೊಂದಿಗೆ ಭಾಗ್ಯನಗರದ ವಿಜಯನಗರ ಕಾಲೋನಿಯಲ್ಲಿ ಮಂಗಳವಾರ (ಜೂ. 16ರಂದು) ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ ಜರುಗಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಪರೀವಿಕ್ಷಣಾಧಿಕಾರಿಗಳಾದ ಶಿವಲೀಲಾ ವನ್ನೂರು ಅವರು ಮಾತನಾಡಿ, ಮಕ್ಕಳೆಂದರೆ ಹೆಣ್ಣಿರಲಿ ಗಂಡು ಇರಲಿ 18 ವರ್ಷದೊಳಗಿನವರನ್ನು ನಾವು ಮಕ್ಕಳೆಂದು ಕರೆಯುತ್ತೇವೆ. ಮಕ್ಕಳ ನಡುವೆ ಎಂತಹದ್ದೇ ಕಾರಣಕ್ಕೂ ತಾರತಮ್ಯ ಮಾಡದಂತೆ ಹಾಗೂ ಮಕ್ಕಳಲ್ಲಿ ಕೀಳರಿಮೆಯನ್ನು ಉಂಟುಮಾಡದಂತೆ ಎಲ್ಲ ವಯಸ್ಕರು ಎಚ್ಚರವಹಿಸಬೇಕು. ಹುಟ್ಟಿದ ಎಲ್ಲ ಮಕ್ಕಳು ಆರೋಗ್ಯದಿಂದ ಜೀವಿಸುವ ಮತ್ತು ಬೆಳೆಯುವ ಹಕ್ಕನ್ನು ಸ್ವಾಭಾವಿಕವಾಗಿ ಹೊಂದಿದ್ದಾರೆ. ಹಿರಿಯರು ಮಕ್ಕಳ ಅಭಿಪ್ರಾಯಗಳಿಗೆ ಮನ್ನಣೆ ನೀಡಬೇಕು. ಪ್ರತಿಯೊಂದು ಮಗು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದರು.

ಮಕ್ಕಳು ಮತ್ತು ಮಹಿಳೆಯರು ಭಿಕ್ಷಾಟನೆಗೆ ತೆರಳದಂತೆ ಕುಟುಂಬ ಹಾಗೂ ಸ್ಥಳೀಕರು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕು. ಸರ್ಕಾರದಿಂದ ಮಹಿಳೆಯರಿಗಾಗಿ ದೊರೆಯುವಂತಹ ಉದ್ಯೋಗಿನಿ ಯೋಜನೆ, ಗೃಹಲಕ್ಷ್ಮೀ ಯೋಜನೆಗಳ ಲಾಭ ಪಡೆದುಕೊಂಡು ವಿವಿಧ ಕೌಶಲ್ಯ ಕಲಿತು ವ್ಯಾಪಾರ ಮಾಡುವ ನಿಟ್ಟಿನಲ್ಲಿ ಸ್ವಾಲಂಬಿ ಬದುಕು ಮಾಡಬೇಕು. ಮಕ್ಕಳಿಗೆ ಇರುವಂತಹ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ-2009ರ ಅಡಿಯಲ್ಲಿ ಪ್ರತಿಯೊಂದು ಮಗು ಶಿಕ್ಷಣದಿಂದ ವಂಚಿತವಾಗಬಾರದು. ತಂದೆ-ತಾಯಿ ತೀರಿದ ಮಗು ಪೋಷಕರೊಂದಿಗೆ ವಾಸವಾಗಿದ್ದು ಶಾಲೆಗೆ ಹೋಗುತ್ತಿದ್ದರೆ ಅಂತಹ ಮಕ್ಕಳಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಲ್ಲಿ ಪ್ರಾಯೋಜಿಕತ್ವ ಯೋಜನೆ ಸೌಲಭ್ಯ ಪಡೆದು ಆರ್ಥಿಕವಾಗಿ ಸಂಕಷ್ಟದಿಂದ ದೂರವಾಗುವಂತೆ ಅನುಕೂಲತೆಯನ್ನು ಪಡೆಯಬೇಕು. ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯಿದೆ-2012 ರಲ್ಲಿ ಜಾರಿಗೆ ಬಂದಿದ್ದು, ಯಾವುದೇ ವ್ಯಕ್ತಿ ಲೈಂಗಿಕ ದೌರ್ಜನ್ಯ ಎಸಗಿದರೆ ಮತ್ತು ಮಕ್ಕಳ ದೇಹದ ಮೇಲೆ ಅಸುರಕ್ಷತ ಸ್ಪರ್ಶ ಮಾಡಿದರೆ ಘಟನೆಯ ಸ್ವರೂಪದ ಆಧಾರದ ಮೇಲೆ 20 ರಿಂದ ಜೀವಾವಧಿ ಮತ್ತು ಗಲ್ಲು ಶಿಕ್ಷೆಯನ್ನು ಸಹ ವಿಧಿಸಬಹುದು ಎಂದರು.

ಅಕ್ಕಪಡೆ ಪೊಲೀಸ್ ಅಧಿಕಾರಿ ಸಾವಿತ್ರಿ ಡಿ. ಅವರು ಮಾತನಾಡಿ, ಜಿಲ್ಲೆಯಲ್ಲಿ ರೈಲ್ವೆ ಸ್ಟೇಷನಗಳು, ಬಸ್ಸ್ ನಿಲ್ದಾಣಗಳಲ್ಲಿ, ದೇವಸ್ಥಾನ, ಸಿನಿಮಾ ಟಾಕೀಜ್, ಪ್ರವಾಸಿ ತಾಣಗಳಲ್ಲಿ, ಮಾಲ್‌ಗಳಲ್ಲಿ, ಬೀದಿಗಳಲ್ಲಿ, ಶಾಲಾ ಕಾಲೇಜ್ ಗಳಲ್ಲಿ ಮತ್ತು ಕುಟುಂಬ ಹಾಗೂ ಸಮುದಾಯಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ದೈಹಿಕ, ಲೈಂಗಿಕ, ಮಾನಸಿಕ ಹಿಂಸೆಗಳು ಏನಾದರು ಯಾವುದೇ ವ್ಯಕ್ತಿ ನೀಡಿದಲ್ಲಿ ಅಕ್ಕಪಡೆಯ ಸಂಖ್ಯೆ 181 ಗೆ ಕರೆ ಮಾಹಿತಿ ನೀಡಿದರೆ, ಆ ಸ್ಥಳಕ್ಕೆ ಅಕ್ಕಪಡೆಯ ತಂಡ ರಕ್ಷಣೆಗಾಗಿ ಧಾವಿಸುತ್ತದೆ. ಹಾಗೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ತುರ್ತು ಪೊಲೀಸ್ ಉಚಿತ ಸಹಾಯವಾಣಿ ಸಂಖ್ಯೆ 112 ಗೂ ಸಹ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಸಹಾಯವಾಣಿ ಸಂಯೋಜಕ ಶರಣಪ್ಪ ಅವರು ಮಾತನಾಡಿ, ಬಾಲ್ಯ ವಿವಾಹ, ಬಾಲಕಾರ್ಮಿಕ, ಮಕ್ಕಳ ಭಿಕ್ಷಾಟನೆ ಲೈಂಗಿಕ ದೌರ್ಜನ್ಯ, ಕಾಣೆಯಾದ ಮಗು, ಮಗುಪತ್ತೆ, ಬಿದಿಯಲ್ಲಿ ಬಿಸಾಕಿದ ಮಗು, ಶಾಲೆಯಿಂದ ಹೊರಗುಳಿದ ಮಕ್ಕಳು ಕಂಡುಬಂದಲ್ಲಿ ದಿನದ 24 ಗಂಟೆಗಳ ಕಾಲ ಚಾಲನೆಯಲ್ಲಿರುವ ಉಚಿತ ದೂರವಾಣಿ ಸಂಖ್ಯೆ ಮಕ್ಕಳ ಸಹಾಯವಾಣಿ 1098 ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡಿದವರ ಹೆಸರನ್ನು ಗೌಪ್ಯವಾಗಿ ಇಟ್ಟು ಮಗುವಿನ ರಕ್ಷಣೆ ವಿವಿಧ ಇಲಾಖೆಯ ಸಹಯೋಗದೊಂದಿಗೆ ಮಾಡಲಾಗುತ್ತದೆ ಎಂದರು. ಈ ಸಂದರ್ಭದಲ್ಲಿ ನಾಗರತ್ನ ಮತ್ತು ಚೈತ್ರ, ಶರಣಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಟಿಬಿ ಡ್ಯಾಮಗೆ ಹೊಸ ಗೇಟಗಳ ಅಳವಡಿಕೆ ಕಾಮಗಾರಿ ಪೂರ್ಣ

ಸಿಎಂ ಕಾರ್ಯಕ್ರಮದ ಸ್ಥಳ ಪರಿಶೀಲಿಸಿದ ಸಚಿವ ರಾಮಲಿಂಗಾರೆಡ್ಡಿ



ಕೊಪ್ಪಳ ಜೂ.19-

ರಾಜ್ಯ ಜಲ ಸಂಪನ್ಮೂಲ ಸಚಿವರಾದ ರಾಮಲಿಂಗಾ ರೆಡ್ಡಿ ಅವರು ಪೂರ್ವ ನಿಗದಿಯಂತೆ ಜೂನ್ 18ರಂದು ಕೊಪ್ಪಳ ಜಿಲ್ಲೆಗೆ ಆಗಮಿಸಿ, ತುಂಗಭದ್ರಾ ಜಲಾಶಯಕ್ಕೆ ಹೊಸದಾಗಿ ಅಳವಡಿಸಿದ ಕ್ರಸ್ಟ್ ಗೇಟಗಳ ಉದ್ಘಾಟನಾ ಕಾರ್ಯಕ್ರಮದ ಸ್ಥಳ ಪರಿಶೀಲಿಸಿದರು.

ಜೂನ್ 25ಕ್ಕೆ ನಿಗದಿಯಾದ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮ ಹಿನ್ನೆಲೆಯಲ್ಲಿ ಮುನಿರಾಬಾದ್ ಗ್ರಾಮದ ಹೈಸ್ಕೂಲ್ ಗ್ರೌಂಡ್ ಆವರಣದ ಸ್ಥಳ ವೀಕ್ಷಣೆ ನಡೆಸಿ, ಸುಗಮ ಸಂಚಾರಕ್ಕೆ ಸೂಕ್ತವಾದ ರಸ್ತೆ, ಬ್ಯಾರಿಕೇಡ್ ಅಳವಡಿಕೆ ಸೇರಿದಂತೆ ನಾನಾ ಸಿದ್ಧತೆಗಳ ಬಗ್ಗೆ ಸೂಚನೆ ನೀಡಿದರು. ಟಿಬಿ ಡ್ಯಾಮ್ ಆವರಣದಿಂದ ಮುನಿರಾಬಾದ್ ಶಾಲಾ ಮೈದಾನಕ್ಕೆ ಬಂದು ಹೋಗಲು ಅನುಕೂಲವಾಗುವಂತೆ ಯಾವ ರಸ್ತೆ ಸೂಕ್ತ ಎಂಬುದರ ಬಗ್ಗೆ ನೋಡಿಕೊಳ್ಳಲು ಸಚಿವರು ತಿಳಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಮುಖ್ಯಮಂತ್ರಿಗಳು ಮತ್ತು ತಾವು ಕೇಂದ್ರದ ಜಲ ಸಂಪನ್ಮೂಲ ಸಚಿವರಿಗೆ ಭೇಟಿ ಮಾಡಿ ಮಹಾದಾಯಿ, ಮೇಕೆದಾಟು ಯೋಜನೆ ಸೇರಿದಂತೆ ರಾಜ್ಯದ ನಾನಾ ನೀರಾವರಿ ಯೋಜನೆಗಳ ಬಗ್ಗೆ ಚರ್ಚಿಸಿದ್ದೇವೆ.

ಕಳೆದ ವರ್ಷ ತುಂಗಭದ್ರಾ ಡ್ಯಾಮನ ಗೇಟ್ ಕೊಚ್ಚಿ ಹೋದಾಗ 19ನೇ ಕ್ರಸ್ಟ್ ಗೇಟ್ ಸೇರಿದಂತೆ ಬೇರೆಲ್ಲ ಗೇಟಗಳನ್ನು ಬದಲಾಯಿಸಲು ನಿರ್ಣಯಿಸಿ ಆರಂಭಗೊಂಡ ಕಾಮಗಾರಿ ಈಗ ಪೂರ್ಣಗೊಂಡಿದೆ. ಇದಕ್ಕಾಗಿ 51 ಕೋಟಿ ರೂ ಖರ್ಚಾಗಿದೆ. ಈ ಗೇಟಗಳು 55 ರಿಂದ 60 ವರ್ಷಗಳವರೆಗೆ ಬಾಳಿಕೆ ಬರುತ್ತವೆ ಎಂದು ತಿಳಿಸಿದರು.

ಹೊಸ ಗೇಟಗಳ ಲೋಕಾರ್ಪಣೆ ಸಮಾರಂಭಕ್ಕೆ ಕರ್ನಾಟಕ ಸೇರಿದಂತೆ ತೆಲಂಗಾಣ ಮತ್ತು ಆಂದ್ರ ರಾಜ್ಯಗಳ ಮುಖ್ಯಮಂತ್ರಿಗಳು, ಸಚಿವರು, ಶಾಸಕರು ಆಗಮಿಸಲಿದ್ದಾರೆ.

ಈ ವೇಳೆ ಆಂಧ್ರಪ್ರದೇಶ ಮತ್ತು ತೆಲಂಗಾಣ ಸಿಎಂ ಮತ್ತು ಸಚಿವರೊಂದಿಗೆ ಮಾತುಕತೆಗೆ ಏರ್ಪಾಡು ಮಾಡಿ ಜಲಾಶಯದ ನೀರಿನ ಹಂಚಿಕೆ ಸೇರಿದಂತೆ ನಾನಾ ಸಮಸ್ಯೆಗಳ ಬಗ್ಗೆ ಚರ್ಚಿಸುತ್ತೇವೆ.

ನವಲಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ನಾವು ಬದ್ದರಾಗಿದ್ದು ಮೂರು ರಾಜ್ಯಗಳ ಸಿಎಂ ಮತ್ತು ಸಚಿವರು ಒಂದೆಡೆ ಸೇರಿ ಚರ್ಚಿಸಿ ನಿರ್ಣಯಿಸಲು ಇದು ಸಕಾಲವಾಗಿದೆ ಎಂದು ತಿಳಿಸಿದರು. ಮೂರು ರಾಜ್ಯಗಳ ಸಿಎಂ ಮತ್ತು ಸಚಿವರ ಈ ಸಭೆಯಲ್ಲಿ ಮಹತ್ವದ ಪ್ರಸ್ತಾವಣೆಗಳ ಬಗ್ಗೆ ಚರ್ಚಿಸುತ್ತೇವೆ ಎಂದರು.

ಕರ್ನಾಟಕ, ತೆಲಂಗಾಣ ಮತ್ತು ಆಂದ್ರಪ್ರದೇಶ ಮೂರು ರಾಜ್ಯಗಳಿಗೆ ಸಂಬಂಧಿಸಿದಂತೆ

ಅಂತಾರಾಜ್ಯ ನದಿ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಲು ಇದು ಸಕಾಲ. ಈ ಭಾಗ ಸೇರಿದಂತೆ ಯಾವುದೇ ಭಾಗದ ಜನತೆಗೆ

ಅನ್ಯಾಯ ಆಗೋಕೆ ಬೀಡುವುದಿಲ್ಲ ಎಂದು ಸಚಿವರು ಹೇಳಿದರು.

ಈ ವೇಳೆ ಸಂಸದರಾದ ಕೆ ರಾಜಶೇಖರ ಹಿಟ್ನಾಳ, ಮುಖಂಡರಾದ ಅಮರೇಶ ಕರಡಿ, ಬಳ್ಳಾರಿ ವಲಯದ

ಐಜಿಪಿ ಡಾ.ಪಿ ಎಸ್ ಹರ್ಷ, ಕೊಪ್ಪಳ ಜಿಲ್ಲಾಧಿಕಾರಿ ಡಾ.ಸುರೇಶ ಇಟ್ನಾಳ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತಕುಮಾರ, ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಹಾಗೂ ಇತರರು ಇದ್ದರು.

ಡಾ. ಸಿದ್ದಯ್ಯ ಪುರಾಣಿಕರ ಜನ್ಮ ದಿನಾಚರಣೆ



ಕೊಪ್ಪಳ ಜೂ.19

ಕೊಪ್ಪಳ ಜಿಲ್ಲೆಯ ಪ್ರಮುಖ ಸಾಹಿತಿಗಳಾದ ಡಾ. ಸಿದ್ದಯ್ಯ ಪುರಾಣಿಕ್ ರವರ ಜನ್ಮ ದಿನಾಚರಣೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಗುರುವಾರ (ಜೂ. 18ರಂದು) ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಯಿತು.

ಕೊಪ್ಪಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಅವರು ಡಾ. ಸಿದ್ದಯ್ಯ ಪುರಾಣಿಕ್ ರವರ ಭಾವಚಿತ್ರಕ್ಕೆ ಪುಷ್ಪಾರ್ಪಿಸಿ ಗೌರವ ನಮನವನ್ನು ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಶರಣ ಸಾಹಿತ್ಯ, ವಚನ ಸಾಹಿತ್ಯಕ್ಕೆ ದೊಡ್ಡ ಕೊಡುಗೆಯನ್ನು ನೀಡಿದ ಡಾ. ಸಿದ್ದಯ್ಯ ಪುರಾಣಿಕ್ ರವರು ಹೈದ್ರಬಾದ್ ಕರ್ನಾಟಕದಲ್ಲಿ ಬಿ.ಎಮ್ ಶ್ರೀ, ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರನ್ನು ಕರೆಸಿ ಕನ್ನಡದ ಕಹಳೆಯನ್ನು ಮೊಳಗಿಸಿ, ಕನ್ನಡ ವಿಶ್ವಕೋಶ ಯೋಜನೆ, ಕನ್ನಡ ಸಾಹಿತ್ಯ ಪರಿಷತ್ ನಿಘಂಟು ಯೋಜನೆ, ಜೈಮಿನಿ ಭಾರತ, ಹರಶ್ಚಂದ್ರ ಕಾವ್ಯ ಪ್ರಕಟಣೆಯಲ್ಲಿ ಅಮೋಘವಾದ ಕಾರ್ಯವನ್ನು ನಿರ್ವಹಿಸಿ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ ಎಂದರು.

ಕೊಪ್ಪಳ ಜಿಲ್ಲೆಯಲ್ಲಿ ಈಗಾಗಲೇ ಡಾ.ಸಿದ್ದಯ್ಯ ಪುರಾಣಿಕ್ ಟ್ರಸ್ಟ್ ಸ್ಥಾಪನೆಯಾಗಿದ್ದು, 2026-27ನೇ ಸಾಲಿನಲ್ಲಿ ಪುರಾಣಿಕ್ ರವರ ಸಾಹಿತ್ಯ, ಸಂಶೋಧನೆ ಆಧರಿಸಿ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದೆಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಕೊಪ್ಪಳ ಜಿಲ್ಲಾ ವ್ಯವಸ್ಥಾಪಕರಾದ ಎಂ.ಎಸ್ ದೊಡ್ಡಮನಿ, ವಾಲ್ಮೀಕಿ ಅಭಿವೃದ್ಧಿ ನಿಗಮದ ತಾಲೂಕು ಅಧಿಕಾರಿ ಯಮನೂರಪ್ಪ ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ 2ನೇ ಸುತ್ತಿನ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆ

ಜಿಲ್ಲೆಯ 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಲಸಿಕೆ ನೀಡಿ: ಸಿದ್ರಾಮೇಶ್ವರ



ಕೊಪ್ಪಳ ಜೂ.19-

ಜೂನ್ 28 ರಿಂದ ಜುಲೈ 1ರ ವರೆಗೆ ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದಡಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಲಸಿಕೆ ನೀಡುವ ಮೂಲಕ ಜಿಲ್ಲೆಯಲ್ಲಿ ಶೇ. 100 ರಷ್ಟು ಪ್ರಗತಿ ಸಾಧಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಹೇಳಿದರು.

ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಕುರಿತು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಗುರುವಾರ (ಜೂ. 18ರಂದು) ಹಮ್ಮಿಕೊಂಡಿದ್ದ 2ನೇ ಸುತ್ತಿನ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ದೇಶದಲ್ಲಿ ಪೋಲಿಯೋ ಪ್ರಕರಣಗಳು ಕಂಡುಬಂದಿಲ್ಲವಾದರೂ, ನಾವು ಮೈಮರೆಯುವಂತಿಲ್ಲ. ಪೋಲಿಯೋ ನಿರ್ಮೂಲನೆ ಸರ್ಕಾರದ ಪ್ರಮುಖ ಗುರಿಯಾಗಿದ್ದು, ಮನೆ ಮನೆಗೆ ತೆರಳಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಲಸಿಕೆ ನೀಡಬೇಕು. ಪಲ್ಸ್ ಪೋಲಿಯೋ ಲಸಿಕೆಯಿಂದ ಯಾವುದೇ ಅರ್ಹ ಮಗು ವಂಚಿತವಾಗಬಾರದು. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 1 ರವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನವನ್ನು ಯಶಸ್ವಿಗೊಳಿಸಬೇಕು. ಇದಕ್ಕಾಗಿ ವಿವಿಧ ಇಲಾಖೆಗಳ ಸಹಕಾರ ತೆಗೆದುಕೊಂಡು ಲಸಿಕಾ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದ ಬಗ್ಗೆ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಜನರಿಗೆ ಪೋಲಿಯೊ ಲಸಿಕೆಯ ಕುರಿತು ಹೆಚ್ಚಿನ ಜಾಗೃತಿ ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಿ ತಮಗೆ ವಹಿಸಲಾದ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಎನ್.ಜಿ.ಓ ಮತ್ತು ಸ್ವಯಂ ಸೇವಾ ಸಂಸ್ಥೆಗಳ ಸಹಕಾರ ತೆಗೆದುಕೊಂಡು ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು 100ಕ್ಕೆ 100ರಷ್ಟು ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಲಿಂಗರಾಜು ಟಿ., ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ. ಪ್ರಕಾಶ ವಿ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ರವೀಂದ್ರನಾಥ ಎಂ.ಎಚ್., ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿಗಳಾದ ಡಾ.ಪ್ರಕಾಶ ಎಚ್., ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ.ನಂದಕುಮಾರ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಡಾ. ಶಶಿಧರ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿಗಳಾದ ಡಾ. ಗೋನಾಳ ಕುಮಾರಸ್ವಾಮಿ, ಕೊಪ್ಪಳ ರೋಟರಿ ಕ್ಲಬ್ ಅಧ್ಯಕ್ಷರಾದ ಡಾ. ಕೆ.ಜಿ ಕುಲಕರ್ಣಿ, ಇನ್ನರ್ ವೀಲ್ ಕ್ಲಬ್ ಡಾ. ರಾಧಾ ಕುಲಕರ್ಣಿ ಸೇರಿದಂತೆ ಇತರೆ ವೈದ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ಎನ್.ಜಿ.ಓ.ಗಳ ಪ್ರನಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ದೇವದುರ್ಗ ಪಟ್ಟಣಕ್ಕೆ ಜಿಲ್ಲಾಧಿಕಾರಿ ಪೂವಿತಾ ದಿಢೀರ್ ಭೇಟಿ; ಪರಿಶೀಲನೆ

ಸೂಕ್ತ ಕ್ರಮವಹಿಸಬೇಕೆಂದು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಂತರ ಸಿಬ್ಬಂದಿಗಳು ಕಾರ್ಯನಿರ್ವಹಿಸುವ ಕೊಠಡಿಗಳಿಗೆ ತೆರಳಿ ಒಂದೊದು ಸಮಸ್ಯೆಗಳು ಆಲಿಸಿದರು. ಶಾಲಾ-ಕಾಲೇಜುಗಳು ಆರಂಭವಾಗಿದ್ದು, ಜಾತಿ ಪ್ರಮಾಣ ಪತ್ರ ಸೇರಿದಂತೆ ಇತರೆ ಪ್ರಮಾಣ ಪತ್ರಗಳು ಸಕಾಲಕ್ಕೆ ವಿದ್ಯಾರ್ಥಿಗಳಿಗೆ ಮುಟ್ಟಿಸುವ ಕೆಲಸ ಮಾಡಬೇಕು. ಯಾವುದೇ ಕಾರಣಕ್ಕೆ ವಿದ್ಯಾರ್ಥಿಗಳು ಶಾಲೆ, ಕಾಲೇಜ್ ಬಿಟ್ಟು ಕಚೇರಿಗೆ ಅಲೆಯದಂತೆ ನೋಡಿಕೊಳ್ಳಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ವಸತಿ ನಿಯಲಕ್ಕೆ ಭೇಟಿ: ದೇವದುರ್ಗ ಪಟ್ಟಣದ ಹೊರವಲಯದ ರಾಯಚೂರು ರಸ್ತೆಯ ಹತ್ತಿರುವ ವಿವಿಧ ವಸತಿ ನಿಲಯಗಳಿಗೆ ಜಿಲ್ಲಾಧಿಕಾರಿ ಅವರು ಭೇಟಿ ನೀಡಿ, ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿವಿಧ ಸೌಲಭ್ಯಗಳನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ನಿಲಯದ ಕೊಠಡಿಗಳು, ಗ್ರಂಥಾಲಯ, ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಅಡುಗೆ ಮನೆ, ದಿನಸಿ ಸಾಮಗ್ರಿಗಳ ಉಗ್ರಾಣ ಇತರೆ ಸೌಲಭ್ಯಗಳನ್ನು ಕೂಲಂಕುಶವಾಗಿ ಪರಿಶೀಲಿಸಿ ಅಗತ್ಯ ಮಾಹಿತಿಯನ್ನು ಪಡೆದು, ವಿದ್ಯಾರ್ಥಿಗಳಿಗೆ ಸರಕಾರದಿಂದ ಸಿಗುವ ಸೌಲಭ್ಯಗಳನ್ನು ಸರಿಯಾದ ರೀತಿಯಲ್ಲಿ ಕೊಡಬೇಕೆಂದರು,

ನತರ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದ ಜಿಲ್ಲಾಧಿಕಾರಿಗಳು ವಿದ್ಯಾರ್ಥಿಗಳ ಕನಸುಗಳು, ಗುರಿಗಳು ಹಾಗೂ ಭವಿಷ್ಯದ ಯೋಜನೆಗಳ ಕುರಿತು ಸಂವಾದ ನಡೆಸಿ ತಮ್ಮ ಸ್ಪೂರ್ತಿದಾಯಕ ಮಾತುಗಳ ಮೂಲಕ ವಿದ್ಯಾರ್ಥಿಗಳನ್ನು ಸರ್ವತೋಮುಖ ಬೆಳವಣಿಗೆ ಸಾಧಿಸಲು ಹುರಿದುಂಬಿಸಿದರು.

ಇದಕ್ಕೂ ಮುಂಚೆ ದೇವದುರ್ಗ ಪಟ್ಟಣದ ಅಂಗನವಾಡಿ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ದೇವದುರ್ಗ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ, ಅರಕೇರಾ ತಹಶೀಲ್ದಾರ್ ಅಮರೇಶ, ತಾಲೂಕು ಆರೋಗ್ಯಾಧಿಕಾರಿ ಡಾ.ಬನದೇಶ್ವರ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಮಾದರಿಯ ಶುದ್ಧ ಮತದಾರರ ಪಟ್ಟಿ ತಯಾರಿಸುವುದೇ ಎಸ್‌ಐಆರ್ ಕಾರ್ಯಕ್ರಮ: ಡಾ. ಹಂಪಣ್ಣ ಸಜ್ಜನ್

ತಮ್ಮ ಮಾಹಿತಿಯನ್ನು ಸರಿಯಾಗಿ ದಾಖಲಿಸಿ ಮತದಾನದ ಹಕ್ಕು ಉಳಿಸಿಕೊಳ್ಳಬೇಕು ಎಂದು ಹೇಳಿದರು.

2002ರ ಮತಪಟ್ಟಿ ವಿವರ ಗಳನ್ನು ಸಮರ್ಪಕವಾಗಿ ತುಂಬಿ ನೀಡಬೇಕು. ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರಿಕೆ ವಹಿಸಬೇಕು. ಎಸ್‌ಐಆರ್ ಯೋಜನೆ ಯಶಸ್ವಿಯಾದರೆ ಚುನಾವಣೆ ಪ್ರಕ್ರಿಯೆ ಇನ್ನಷ್ಟು ಪಾರದರ್ಶಕ ಹಾಗೂ ವಿಶ್ವಾಸಾರ್ಹ ವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮತದಾರರ ಸಾಕ್ಷರತಾ ಕ್ಲಬ್ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ್ ಮಾತನಾಡಿ, ಮತದಾರರ ಪಟ್ಟಿಯ ಪರಿಷ್ಕರಣೆ ಜಾಗೃತ ನಾಗರಿಕರ ಹೊಣೆಗಾರಿಕೆಯಾಗಿದೆ. ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಮತದಾ ರರ ಪಟ್ಟಿಯಲ್ಲಿ ಇರುವಂತೆ ನೋಡಿ ಕೊಳ್ಳಬೇಕು. ಎಸ್‌ಐಆರ್ ಯೋಜನೆಗೆ ಸಹಕರಿಸುವ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸ ಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ. ಶಂಕರಗೌಡ, ತಾಲೂಕು ಪಂಚಾಯತ್ ಅಧಿಕಾರಿಗಳಾದ ಚಂದ್ರಶೇಖರ ಪವಾರ್, ಜಿಲ್ಲಾ ಸರ್ಕಾರಿ ನೌಕರರ ಸಂಘದ ಕಾರ್ಯಾ ಧ್ಯಕ್ಷರು, ಪ್ರಜಾಪಿತ ಬ್ರಹ್ಮಕುಮಾರಿ ಸಂಸ್ಥೆಯ ರಾಜಯೋಗಿನಿ ಬಿ.ಕೆ. ಸ್ಮಿತಾ ಅಕ್ಕ, ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಪರಶುರಾಮ್ ಎಚ್., ಭಾರತ ಸೇವಾದಳದ ವಿಭಾಗೀಯ ಸಂಚಾಲಕ ವಿದ್ಯಾ ಸಾಗರ ಚಿಮಣಗೇರಿ, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಜಿಲ್ಲಾ ಆಯುಷ್ ಹಾಗೂ ಯುನಾನಿ ವೈದ್ಯರು, ತಾಲೂಕು ಪಂಚಾಯತ್ ಸಿಬ್ಬಂದಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕ್ಷೇತ್ರದ ಅಭಿವೃದ್ಧಿಯೇ ನಮ್ಮ ಸಂಕಲ್ಪ, ಜನಸೇವೆಯೇ ನಮ್ಮ ಧ್ಯೇಯ

ಮಾರೆಮ್ಮವ್ವ ದೇವಸ್ಥಾನ ನಿರ್ಮಾಣ ಭೂಮಿ ಪೂಜೆ ನೆರವೇರಿಸಿದರು.

10 ಲಕ್ಷ ರೂ ಅನುದಾನ : ಶಾಸಕ ದದ್ದಲ್ ಮಾತನಾಡಿ ಪ್ರತಿಯೊಬ್ಬರು ಶಿಕ್ಷಣವನ್ನು ಪಡೆದರೆ ಎಲ್ಲರನ್ನು ಸಮಾನವಾಗಿ ಕಾಣುವಂತದು, 371 j ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಬಹಳಷ್ಟು ಉದ್ಯೋಗಗಳನ್ನು ದೊರೆಯುವಂತದು, ಹಾಗೂ ಸುಮಾರು 13 ಸರಕಾರಿ ಪ್ರೌಢ ಶಾಲೆಗಳು, 8 KPS ಶಾಲೆಗಳು ಮಂಜೂರು ಮಾಡಿರುವಂತದು 2 ಬಾರಿ ಶಾಸಕಾಗಿ ಸುಮಾರು 100 ಕೋಟಿ ರೂ ಹೆಚ್ಚು ಶಿಕ್ಷಣ ಇಲಾಖೆಗೆ ಅನುದಾನವನ್ನು ನೀಡಲಾಗಿದೆ, ಪ್ರತಿ ಗ್ರಾಮೀಣ ಪ್ರದೇಶದ ಹಳ್ಳಿಗಳಲ್ಲಿ ಕೆಲಸ ಕಾರ್ಯಗಳನ್ನು ಮಾಡುವಂತದು ನನ್ನ ಕರ್ತವ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಊರಿನ ಹಿರಿಯ ಮುಖಂಡರುಗಳು, ಸುತ್ತಮುತ್ತಲಿನ ಗ್ರಾಮಗಳ ಮುಖಂಡರುಗಳು,

ಪಾರ್ವತಮ್ಮ ನಿಧನಕ್ಕೆ ಶ್ರದ್ಧಾಂಜಲಿ: ಪಾಪಾರೆಡ್ಡಿ ಜನಪ್ರಿಯತೆಯ ಹಿಂದೆ ಅವರೇ ದೊಡ್ಡ ಶಕ್ತಿ - ಶಂಕ್ರಪ್ಪ

ಮನೋಭಾವ ಮತ್ತು ಕುಟುಂಬ ಮೌಲ್ಯಗಳನ್ನು ಸ್ಮರಿಸಿ ನುಡಿನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಮಾಜದ ಅಧ್ಯಕ್ಷ ಬೆಲ್ಲಂ ನರಸರೆಡ್ಡಿ ಸೇರಿದಂತೆ ಸಿದ್ದನಗೌಡ, ಮಹಮ್ಮದ್ ಶಾಲಂ, ಕಡಗೋಲ್ ಆಂಜನೇಯ, ಆರ್.ಕೆ. ಅಮರೇಶ, ಯು. ಕೃಷ್ಣಮೂರ್ತಿ, ಜಿ. ಶೇಖರ್ ರೆಡ್ಡಿ, ಎನ್. ಶ್ರೀನಿವಾಸ್ ರೆಡ್ಡಿ, ಯೂಸುಫ್ ಖಾನ್, ವಿ. ಲಕ್ಷ್ಮಿರೆಡ್ಡಿ, ಕೆ. ರಾಜೇಂದ್ರ ರೆಡ್ಡಿ, ಯು. ಲಿಂಗಾರೆಡ್ಡಿ, ಶವಂತಗೇರಿ ವಿಜಯ್ ಕುಮಾರ್ ಸೇರಿದಂತೆ ಸಮಾಜದ ಅನೇಕ ಮುಖಂಡರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಹಲ್ಲೆ, ವಿಡಿಯೋ ವೈರಲ್ ಸಂಚು ಆರೋಪ: ಜಿಲ್ಲಾಧಿಕಾರಿಗೆ ದಲಿತ ಸಂಘರ್ಷ ಸಮಿತಿ ಮನವಿ

ಹರಣ ಮಾಡುವ ಪ್ರಯತ್ನ ನಡೆದಿದೆ ಎಂದು ದೂರಲಾಗಿದೆ.

ಸಾಮಾಜಿಕ ಅನ್ಯಾಯ, ದೌರ್ಜನ್ಯ, ಮಹಿಳೆಯರ ಮೇಲಿನ ಹಲ್ಲೆ, ಜಾತಿ ನಿಂದನೆ ಸೇರಿದಂತೆ ವಿವಿಧ ವಿಚಾರಗಳಲ್ಲಿ ಹೋರಾಟ ನಡೆಸುತ್ತಿದ್ದ ಕಾರಣದಿಂದ ರಾಜು ಬೊಮ್ಮನಾಳ ಅವರನ್ನು ಗುರಿಯಾಗಿಸಲಾಗಿದೆ ಎಂದು ಸಂಘಟನೆ ಹೇಳಿದೆ.

ಘಟನೆಯ ಹಿಂದಿರುವ ಕಾಣದ ಕೈವಾಡ, ವಿಡಿಯೋ ವೈರಲ್ ಮಾಡಿದವರು, ಪರೋಕ್ಷವಾಗಿ ಬೆಂಬಲಿಸಿದವರು ಹಾಗೂ ಸಂಚು ರೂಪಿಸಿದವರ ಕುರಿತು ತನಿಖೆ ನಡೆಸಬೇಕು ಎಂದು ಆಗ್ರಹಿಸಲಾಗಿದೆ. ಜೊತೆಗೆ ರಾಜು ಬೊಮ್ಮನಾಳ ಹಾಗೂ ಅವರ ಕುಟುಂಬಕ್ಕೆ ಸೂಕ್ತ ಭದ್ರತೆ ಒದಗಿಸುವಂತೆ ಮನವಿ ಮಾಡಲಾಗಿದೆ.

ಜಿಲ್ಲಾಧ್ಯಕ್ಷ ಅಶೋಕ ನಂಜಲದಿನ್ನಿ ನೇತೃತ್ವದಲ್ಲಿ ಸಲ್ಲಿಸಲಾದ ಮನವಿಗೆ ಹಲವು ಜಿಲ್ಲಾ ಹಾಗೂ ತಾಲೂಕು ಮಟ್ಟದ ಮುಖಂಡರು ಬೆಂಬಲ ಸೂಚಿಸಿದ್ದಾರೆ.

ದ.ಸಂ.ಸ ಪ್ರಮುಖ ಬೇಡಿಕೆಗಳು ★ ಸಮಗ್ರ ತನಿಖೆ ನಡೆಸಬೇಕು, ★ ವಿಡಿಯೋ ಪ್ರಸಾರ ಮಾಡಿದವರ ಪತ್ತೆ, ★ ಸಂಬಂಧಿಸಿದವರ ವಿರುದ್ಧ ಕೇಸ್ ದಾಖಲಿಸಿ ಬಂಧನ, ★ ರಾಜು ಬೊಮ್ಮನಾಳ ಕುಟುಂಬಕ್ಕೆ ರಕ್ಷಣೆ, ★ ಘಟನೆಯ ಹಿಂದಿನ ಸಂಚು ಬಹಿರಂಗೊಳಿಸಬೇಕು

ಜು.11 ರಂದು ಬೃಹತ್ ರಾಷ್ಟ್ರೀಯ ಲೋಕ ಅದಾಲತ್

ಬೀದರ್ ,ಜೂ.19-

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜು.11 ರಂದು ಜಿಲ್ಲಾದ್ಯಂತ ಬೃಹತ್ ರಾಷ್ಟ್ರೀಯ ಲೋಕ ಅದಾಲತ ಹಮ್ಮಿಕೊಳ್ಳಲಾಗಿದೆ. ಅದೇ ರೀತಿ ಜು.18 ರಂದು ಮಧ್ಯಾಹ್ನ 2:30 ಗಂಟೆಗೆ ಎನ್‌ಐ ಆಕ್ಟ್ ಪ್ರಕರಣಗಳ ಕುರಿತು ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಎಸ್.ಬಿ ರಹಮಾನ್ ಅವರು ಹೇಳಿದರು.

ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿ ಸಭಾಂಗಣ ಗುರುವಾರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಬೃಹತ್ ಲೋಕ ಅದಾಲತ್‌ನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಆಸ್ತಿಪಾಲು ವಿಭಾಗ ಜೀವನಾಂಶ, ಚೆಕ್ ಬೌನ್ಸ್ , ವಿದ್ಯುತ್ ಪ್ರಕರಣಗಳು, ಕಂದಾಯ ಅಪರಾಧಿಕ ಪ್ರಕರಣಗಳಲ್ಲಿ ರಾಜಿ ಮಾಡಿಕೊಳ್ಳುವಂತಹ ಪ್ರಕರಣಗಳು, ಕಾರ್ಮಿಕರ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಮಾಡಲು ಅವಕಾಶ ಇರುತ್ತದೆ ಎಂದರು.

ಈ ಹಿಂದೆ ಮಾ.14 ರಂದು



ಹಮ್ಮಿಕೊಂಡಿದ್ದ ರಾಷ್ಟ್ರೀಯ ಲೋಕ ಅದಾಲತನಲ್ಲಿ ಜಿಲ್ಲಾದ್ಯಾಂತ ಒಟ್ಟು 66,440 ಪ್ರಕರಣಗಳು ಇತ್ಯರ್ಥಗೊಳಿಸಲಾಗಿದೆ. ಇದರಲ್ಲಿ 11,869 ನ್ಯಾಯಾಲಯದಲ್ಲಿನ ಪೆಂಡಿಂಗ್ ಪ್ರಕರಣಗಳು, 54,571 ವ್ಯಾಜ್ಯಪೂರ್ವ ಪ್ರಕರಣಗಳು ಸೇರಿವೆ. ಈ ಬಾರಿ ಲೋಕ ಅದಾಲತನಲ್ಲಿ ನ್ಯಾಯಾಲ ಯದಲ್ಲಿ ಬಾಕಿ ಇರುವ ಅತೀ ಹೆಚ್ಚು ಪ್ರಕರಣಗಳನ್ನು ಇತ್ಯಾರ್ಥಗೊಳಿಸಲು ಯೋಜನೆ ರೂಪಿಸಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 30,499 ಪ್ರಕರಣಗಳು ಪೆಂಡಿಂಗ್ ಇವೆ. ಅದರಲ್ಲಿ ಸಂಧಾನಕ್ಕಾಗಿ 1,780 ಪ್ರಕರಣಗಳನ್ನು ಗುರುತಿಸಲಾಗಿದ್ದು, ಇನ್ನು ಹೆಚ್ಚು ಪ್ರಕರಣಗಳನ್ನು ರಾಜಿ ಮಾಡುವ ಗುರಿ ಹೊಂದಿದ್ದೇವೆ ಹಾಗೂ ಎಲ್ಲಾ ಪೂರ್ವತಯಾರಿ ಮಾಡಿಕೊಂಡಿದ್ದೇವೆ ಎಂದು ಅವರು ಮಾಹಿತಿ ನೀಡಿದರು.

ಲೋಕ ಅದಾಲತ್ ನಲ್ಲಿ ಪ್ರಕರಣಗಳಲ್ಲಿ ರಾಜಿ ಮಾಡಿಕೊಳ್ಳುವುದರಿಂದ ಕಕ್ಷಿದಾರನಿಗೆ ನ್ಯಾಯಲಯದ ಶುಲ್ಕ ವಾಪಸ್ ಸಿಗಲಿದೆ. ಮೇಲ್ಮನವಿ ಮಾಡಲು ಅವಕಾಶ ಇರುವುದಿಲ್ಲ. ಇಬ್ಬರೂ ಪಕ್ಷಗಾರರು ತಮ್ಮ ದ್ವೇಷ ಮರೆತು ಸುಮಧುರ ಬಾಂಧವ್ಯ ಹೊಂದುವ ಅವಕಾಶ ಇರುತ್ತದೆ. ಹಾಗೆಯೇ ಯಾವುದೇ ಖರ್ಚು ವೆಚ್ಚ ಇಲ್ಲದೆ ಶೀಘ್ರವಾಗಿ ಪ್ರಕರಣಗಳು ಇತ್ಯರ್ಥವಾಗುತ್ತವೆ.

ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರ ಅವಧಿಯಲ್ಲಿ ದಾಖಲಾದ ಪ್ರಕರಣಗಳಿಗೆ ದಂಡದ ಮೊತ್ತದ ಮೇಲೆ ಶೇ.50 ರಷ್ಟು ವಿನಾಯಿತಿ ನೀಡಲಾಗಿದೆ. ಸಾರ್ವಜನಿಕರು ಜೂ. ರಿಂದ ಜು.10ರ ಒಳಗಡೆ ಈ ಸೌಲಭ್ಯವನ್ನು ಪಡೆಯಲು ಕಾಲಾವಕಾಶ ನೀಡಲಾಗಿದೆ ಎಂದು ಅವರು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಘವೇಂದ್ರ ಉಪಾಧ್ಯಾಯ ಅವರು ಮಾತನಾಡಿ, ನ್ಯಾಯಾಲಯಗಳಲ್ಲಿ ಸುದೀರ್ಘ ಕಾಲದಿಂದ ಬಾಕಿ ಉಳಿದಿರುವ ಮತ್ತು ರಾಜೀ ಮಾಡಿಕೊಳ್ಳಬಹುದಾದ ಪ್ರಕರಣಗಳನ್ನು ಸೌಹಾರ್ದ ಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ರಾಷ್ಟ್ರೀಯ ಲೋಕ ಅದಾಲತ್ ಒಂದು ಅತ್ಯುತ್ತಮ ಅವಕಾಶವಾಗಿದೆ. ಇಲ್ಲಿ ಕೇವಲ ಪ್ರಕರಣಗಳು ಇತ್ಯರ್ಥವಾಗುವುದಿಲ್ಲ, ಬದಲಿಗೆ ಉಭಯ ಪಕ್ಷಗಾರರ ನಡುವಿನ ಬಾಂಧವ್ಯವೂ ಗಟ್ಟಿಯಾಗುತ್ತದೆ. ಈ ಪ್ರಕ್ರಿಯೆಯಲ್ಲಿ ಸಮಯ ಮತ್ತು ಹಣದ ಉಳಿತಾಯವಾಗುವುದಲ್ಲದೆ, ಇಲ್ಲಿ ನೀಡಲಾಗುವ ತೀರ್ಪಿಗೆ ಸಿವಿಲ್ ನ್ಯಾಯಾಲಯದ ತೀರ್ಪಿಗೆ ಇರುವಷ್ಟೇ ಕಾನೂನು ಮಾನ್ಯತೆ ಇರುತ್ತದೆ. ಇದರ ವಿರುದ್ಧ ಮೇಲ್ಮನವಿಗೆ ಅವಕಾಶವಿರುವುದಿಲ್ಲ. ಸಾರ್ವಜನಿಕರು ಮತ್ತು ವ್ಯಾಜ್ಯನಿರತರು ಯಾವುದೇ ಭಯ ಅಥವಾ ಹಿಂಜರಿಕೆಯಿಲ್ಲದೆ ಈ ಅದಾಲತ್‌ನಲ್ಲಿ ಭಾಗವಹಿಸಿ, ಪರಸ್ಪರ ಒಪ್ಪಿಗೆಯ ಮೂಲಕ ತಮ್ಮ ದಾವೆಗಳನ್ನು ಇತ್ಯರ್ಥಪಡಿಸಿಕೊಂಡು ನೆಮ್ಮದಿಯ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಎಲ್ಲಾ ಸಿಬ್ಬಂದಿವರ್ಗ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಬಾಲ್ಯ ವಿವಾಹ ತಡೆಗೆ ಜಾಗೃತಿ ಫಲಕಗಳ ಬಿಡುಗಡೆ: ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಚಾಲನೆ

ಬಳ್ಳಾರಿ,ಜೂ.19-

ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿ ಮಾಡುವ ಉದ್ದೇಶದಿಂದ ಜಿಲ್ಲಾಡಳಿತ ಹಾಗೂ ರೀಚ್ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿರುವ ಮಕ್ಕಳ ಹಕ್ಕುಗಳ ರಕ್ಷಣೆಯ ವಿಶೇಷ ಜಾಗೃತಿ ಅಭಿಯಾನಕ್ಕೆ ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಚಾಲನೆ ನೀಡಿದರು.

ಗುರುವಾರ ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತ ಜಾಗೃತಿ ಫಲಕಗಳನ್ನು ಬಿಡುಗಡೆ ಮಾಡಿದ ಅವರು, ಬಾಲ್ಯ ವಿವಾಹ ತಡೆ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆಯ ಉದ್ದೇಶದಿಂದ ಜಿಲ್ಲೆಯ ಪ್ರಮುಖ ಧಾರ್ಮಿಕ ಕ್ಷೇತ್ರಗಳಲ್ಲಿ ಈ ವಿಶೇಷ ಜಾಗೃತಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಪ್ರಮುಖ ದೇವಸ್ಥಾನಗಳಲ್ಲಿ ಈ ಜಾಗೃತಿ ಫಲಕಗಳನ್ನು ಅಳವಡಿಸಲು ಕ್ರಮಕೈಗೊಳ್ಳುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯ್ಕ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಶಶಿಕಾಂತ, ರೀಚ್ ಸಂಸ್ಥೆಯ ಅಧ್ಯಕ್ಷ ಸಿಂಹ ಸೇರಿದಂತೆ ಇತರರು ಇದ್ದರು.

ಹತ್ತಿ, ತೊಗರಿ ಬೇಸಾಯ ಕ್ರಮಗಳು: ಹೊರಾವರಣ ತರಬೇತಿ



ಕೊಪ್ಪಳ ಜೂ.19-

ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಕೊಪ್ಪಳ ಮತ್ತು ಸಹಾಯಕ ಕೃಷಿ ನಿರ್ದೇಶಕರು ಕೊಪ್ಪಳ ಇವರ ಸಹಯೋಗದಲ್ಲಿ ತೊಗರಿ ಮತ್ತು ಹತ್ತಿ ಬೆಳೆಗಳಲ್ಲಿ ಸುರಕ್ಷಿತ ಕೀಟನಾಶಕ ಬಳಕೆ ಹಾಗೂ ಸಮತೋಲಿ ತರಸಗೊಬ್ಬರ ಬಳಕೆ ಕುರಿತು ಅಳವಂಡಿ ಹೋಬಳಿಯ ಬಿಕನಹಳ್ಳಿ ಗ್ರಾಮದಲ್ಲಿ ಹೊರಾವರಣತರಬೇತಿ ಏರ್ಪಡಿಸಲಾಗಿತ್ತು.

ಅಧಿಕ ಸಾಂದ್ರತೆ ಹತ್ತಿ ಬೇಸಾಯ ಹಾಗೂ ತೊಗರಿ ಬೆಳೆಯ ನಿರ್ವಹಣೆ ಕುರಿತು ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಸ್ತರಣಾ ಮುಂದಾಳು ಡಾ.ಬದರಿ ಪ್ರಸಾದ್ ಪಿ.ಆರ್. ಅವರು ಸಮಗ್ರ ಮಾಹಿತಿ ನೀಡಿದರು. ಅಲ್ಲದೇ ಬರ ಭೂಮಿ ಬೆಳೆಯಾದ ಗೋಡಂಬಿಯ ಕುರಿತು ಮಾಹಿತಿ ನೀಡಿದರು.

ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರಾದ ಜೀವಂತ ಸಾಬ್ ಅವರು, ರೈತರಿಗೆ ಬೀಜೋಪಚಾರ ಮಹತ್ವ ಪರ್ಯಾಯ ರಸಗೊಬ್ಬರಗಳ ಬಗ್ಗೆ ಮಾಹಿತಿ ನೀಡಿದರು.

ಸಹಾಯಕ ತೋಟಗಾರಿಕಾ ಅಧಿಕಾರಿರಾದ ಆರಿಫ್ ಅವರು, ಕೃಷಿ ಮತ್ತು ತೋಟಗಾರಿಕಾ ಪದ್ಧತಿಯ ಬಗ್ಗೆ ಮಾಹಿತಿ ಕೊಟ್ಟರು.

ಕೋರಮಂಡಲ ಇಂಟರ್ನ್ಯಾಷನಲ್ ಅಧಿಕಾರಿ ಅವಿನಾಶ್ ಅವರು, ನ್ಯಾನೋ ರಸಗೊಬ್ಬರಗಳ ಹಾಗೂ ಡ್ರೋನ್ ಬಳಕೆಯ ಬಗ್ಗೆ ರೈತರಿಗೆ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿಗಳಾದ ಪ್ರತಾಪಗೌಡ, ಮಾರುತಿ, ತಾಂತ್ರಿಕ ವ್ಯವಸ್ಥಾಪಕೆಯವರಾದ ತಾರಾ ಹಾಗೂ ನೂರಾರು ರೈತರು ಭಾಗವಹಿಸಿದ್ದರು.

ಹೆಚ್ಚಿನ ಮಾಹಿತಿಗಾಗಿ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಕೊಪ್ಪಳದ ವಿಜ್ಞಾನಿಗಳನ್ನು (ಡಾ. ಬದರಿ ಪ್ರಸಾದಪಿ.ಆರ್., ವಿಸ್ತರಣಾ ಮುಂದಾಳು ಮೊ. ನಂ: 9900 145705) ಸಂಪರ್ಕಿಸಬಹುದು.

ಪರಿಸರ ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ರೋಗ ನಿಯಂತ್ರಣಕ್ಕೆ ಕೈಜೋಡಿಸಬೇಕು: ವೀರಶೆಟ್ಟಿ ಚನ್ನಶೆಟ್ಟಿ



ಬೀದರ್ ,ಜೂ.19-

ಶಾಲಾ ಆವರಣ ಹಾಗೂ ಮನೆಗಳ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ವಿದ್ಯಾರ್ಥಿಗಳು ತಮ್ಮ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ರೋಗ ನಿಯಂತ್ರಣಕ್ಕೆ ಕೈಜೋಡಿಸಬೇಕು ಎಂದು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೀರಶೆಟ್ಟಿ ಚನ್ನಶೆಟ್ಟಿ ಅವರು ಕರೆ ನೀಡಿದರು.

ನಗರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಭಾಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿಯವರ ಸಂಯುಕ್ತಾಶ್ರಯದಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆಯನ್ನು ಶಾಲಾ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ ವಿಶೇಷ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸೊಳ್ಳೆಗಳಿಂದ ಹರಡುವಂತಹ ರೋಗಗಳಾದ ಮಲೇರಿಯಾ, ಆನೆಕಾಲು, ಡೆಂಗ್ಯೂ, ಚಿಕನ್‌ಗುನ್ಯ ಕುರಿತು ತಿಳಿಸುತ್ತಾ, ಮಲೇರಿಯಾ ಜ್ವರವು ಹೆಣ್ಣು ಅನಾಫಿಲಿಸ್ ಸೊಳ್ಳೆ ಕಚ್ಚುವುದರಿಂದ ಹರಡುತ್ತದೆ. ಈ ಸೊಳ್ಳೆಗಳು ಹೆಚ್ಚಾಗಿ ಸ್ವಚ್ಛ ಹಾಗೂ ನಿಂತ ನೀರಿನಲ್ಲಿ ಸಂತಾನೋತ್ಪತ್ತಿ ಮಾಡುತ್ತವೆ. ಜೂನ್ ತಿಂಗಳನ್ನು ಮಲೇರಿಯಾ ಮಾಸಾಚರಣೆ ಎಂದು ಆಚರಿಸಲಾಗುತ್ತಿದ್ದು, ಸಾರ್ವಜನಿಕರಲ್ಲಿ ಅದರಲ್ಲೂ ವಿಶೇಷವಾಗಿ ಶಾಲಾ ಮಕ್ಕಳಲ್ಲಿ ರೋಗದ ಬಗ್ಗೆ ಮುನ್ನೆಚ್ಚರಿಕೆ ಜಾಗೃತಿ ವಹಿಸಬೇಕು ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಹಮ್ಮದ್ ಮಹೆಬೂಬ್ ಮಿಯ್ಯಾ ಅವರು ಮಾತನಾಡಿ, ಸೊಳ್ಳೆಗಳ ಉತ್ಪತ್ತಿ ತಾಣಗಳಾದ ತೆರೆದ ಟ್ಯಾಂಕ್‌ಗಳು, ಹಳೆಯ ಟೈರ್‌ಗಳು, ಪ್ಲಾಸ್ಟಿಕ್ ಕಪ್‌ಗಳು ಹಾಗೂ ಕುಂಡಗಳಲ್ಲಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.

ತೀವ್ರ ಜ್ವರ, ನಡುಕ, ಚಳಿ ಮತ್ತು ತಲೆ ನೋವು ಮಲೇರಿಯಾದ ಪ್ರಮುಖ ಲಕ್ಷಣಗಳಾಗಿದ್ದು, ಇಂತಹ ಲಕ್ಷಣಗಳು ಕಂಡು ಬಂದಲ್ಲಿ ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಉಚಿತ ರಕ್ತ ಪರೀಕ್ಷೆ ಹಾಗೂ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಸಮಿಯೊದಿನ್, ಶಾಲೆಯ ಮುಖ್ಯಗುರು ರಾಘವೇಂದ್ರ ಕುಲಕರ್ಣಿ, ಸಹ ಶಿಕ್ಷಕ ರವೀಂದ್ರ ಹೊಗಾಡೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ರಾಜಕುಮಾರ್ ಗಾದಗಿ, ಸೂರ್ಯಕಾಂತ್ ಸಿಂದಬಂದಗಿ, ಅಶ್ವಿನಿ, ಶ್ರೀದೇವಿ ಹಾಗೂ ಶಶಿಕಾಂತ್ ಬಿರಾದಾರ್ ಸೇರಿದಂತೆ ಆರೋಗ್ಯ ಇಲಾಖೆಯ ಮೇಲ್ವಿಚಾರಕರು, ಆರೋಗ್ಯ ಕಾರ್ಯಕರ್ತೆಯರು, ಶಾಲೆಯ ಮಕ್ಕಳು ಉಪಸ್ಥಿತರಿದ್ದರು.



ಬಳ್ಳಾರಿಯ ಬಿಎಂಸಿಆರ್‌ಸಿಯಲ್ಲಿ ರಾಷ್ಟ್ರೀಯ ಶಸ್ತಚಿಕಿತ್ಸಕರ ದಿನಾಚರಣೆ

ಬಳ್ಳಾರಿ,ಜೂ.19-

ಕೆಎಸ್‌ಸಿ-ಎಎಸ್‌ಐ ಬಳ್ಳಾರಿ ನಗರ ಶಾಖೆ ಹಾಗೂ ಬಿಎಂಸಿಆರ್‌ಸಿ ಸಾಮಾನ್ಯ ಶಸ್ತಚಿಕಿತ್ಸಾ ವಿಭಾಗದ ಸಹಯೋಗದೊಂದಿಗೆ ಬಳ್ಳಾರಿ ವೈದ್ಯಕೀಯ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ಆವರಣದಲ್ಲಿ ಸೋಮವಾರ ರಾಷ್ಟಿಯ ಶಸ್ತಚಿಕಿತ್ಸ ಕರ ದಿನಾಚರಣೆ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ಮತ್ತು ವೃತ್ತಿಪರರಿಗೆ ಉಪಯುಕ್ತವಾಗುವಂತೆ ಕೇಸ್ ಪ್ರೆಸೆಂಟೇಶನ್ ಹಾಗೂ ಅಪರೂಪದ ಪ್ರಕರಣ ವರದಿ ಕುರಿತು ವಿಶೇಷ ಶೈಕ್ಷಣಿಕ ಅಧಿವೇಶನವನ್ನು ಆಯೋಜಿಸಲಾಗಿತ್ತು.


ಎಎಸ್‌ಐ ಸಂಸ್ಥೆಯು ಯುವ ಮತ್ತು ಉದಯೋನ್ಮುಖ ಶಸ್ತಚಿಕಿತ್ಸ ಕರಿಗೆ ನೀಡುತ್ತಿರುವ ಬೆಂಬಲ ಹಾಗೂ ವಿವಿಧ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಅಸೋಸಿಯೇಷನ್ ಆಫ್ ಸರ್ಜನ್ಸ್ ಆಫ್ ಇಂಡಿಯಾದ ರಾಷ್ಟಿಯ ಕಾರ್ಯದರ್ಶಿ ಡಾ. ಗಡ್ಡಿ ದಿವಾಕರ್ ಕರೆ ನೀಡಿದರು.

ಈ ಶೈಕ್ಷಣಿಕ ಸಂವಾದಗಳು ಮತ್ತು ವೈದ್ಯಕೀಯ ಚರ್ಚೆಗಳು ವಿಶೇಷವಾಗಿ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಕಲಿಕೆ, ಸೂಕ್ತ ಮಾರ್ಗದರ್ಶನ ಹಾಗೂ ಅವರ ವೃತ್ತಿಪರ ಅಭಿವೃದ್ಧಿಗೆ ಒಂದು ಅತ್ಯುತ್ತಮ ವೇದಿಕೆಯಾಗಿದೆ ಎಂದರು.

ಎಎಸ್‌ಐ ವತಿಯಿಂದ ದೇಶಾದ್ಯಂತ ಕೈಗೊಳ್ಳಲಾಗುತ್ತಿರುವ ಶೈಕ್ಷಣಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ಅವರ ಸೇವೆ ಮತ್ತು ಕೊಡುಗೆಗಳನ್ನು ಗುರುತಿಸಿ, ಕಾರ್ಯಕ್ರಮದಲ್ಲಿ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಬಿಎಂಸಿಆರ್‌ಸಿ ನಿರ್ದೇಶಕ ಡಾ.ಟಿ.ಗಂಗಾಧರ ಗೌಡ, ಬಿಎಂಸಿಆರ್‌ಸಿ ಸಾಮಾನ್ಯ ಶಸ್ತಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ.ಕಾಸಾ ಸೋಮಶೇಖರ್, ಡಾ.ವಿದ್ಯಾಧರ ಕಿನ್ನಾಳ, ಕೆಎಸ್‌ಸಿ-ಎಎಸ್‌ಐ ಖಜಾಂಚಿ ಡಾ. ವೈ. ಗುರುಬಸವನಗೌಡ, ಕೆಎಸ್‌ಸಿ-ಎಎಸ್‌ಐ ಬಳ್ಳಾರಿ ನಗರ ಶಾಖೆಯ ಅಧ್ಯಕ್ಷ ಡಾ. ಶೇಕಪ್ಪ ಸಿ. ಮಾಳಗಿಮನಿ, ಕಾರ್ಯದರ್ಶಿ ಡಾ. ಗುಡೇಕೋಟೆ ರವಿಕುಮಾರ, ಜಂಟಿ ಕಾರ್ಯದರ್ಶಿ ಡಾ. ಶೈಖ್ ಫರ್ಹಾನ್ ಎಂ.ಬಿ., ಖಜಾಂಚಿ ಡಾ. ಅತುಲ್ ಕುಲಕರ್ಣಿ ಸೇರಿದಂತೆ ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಅಧ್ಯಾಪಕರು, ಹಿರಿಯ ಶಸ್ತಚಿಕಿತ್ಸ ಕರು, ಸ್ನಾತಕೋತ್ತರ ಹಾಗೂ ಪದವಿಪೂರ್ವ ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬ್ಯಾಂಕರ್‌ಗಳ ಸಭೆ: ಗೈರಾದ ಅಧಿಕಾರಿಗಳಿಗೆ ನೋಟಿಸ್ ನೀಡಲು ಜಿ.ಪಂ ಸಿಇಓ ಈಶ್ವರ ಕಾಂದೂ ಸೂಚನೆ: ಯೋಜನೆ ಸಮರ್ಪಕ ಅನುಷ್ಠಾನಕ್ಕೆ ಸಹಕಾರ ನೀಡಲು ನಿರ್ದೇಶನ



ರಾಯಚೂರು,ಜೂ.18-

ಮೂರು ತಿಂಗಳಿಗೊಮ್ಮೆ ಆಗುವ ಜಿಲ್ಲಾ ಮಟ್ಟದ ಬ್ಯಾಂಕರ್‌ಗಳ ಸಭೆಗೆ ಬ್ಯಾಂಕುಗಳ ಹಾಗೂ ಯೋಜನೆಗಳಿಗೆ ಸಂಬಂಧಿಸಿದ ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು ಆಗಮಿಸದಿರುವುದು ಸರಿಯಲ್ಲ, ಸಭೆಗೆ ಗೈರಾದ ಅಧಿಕಾರಿಗಳ ಪಟ್ಟಿ ನೀಡಿ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು. ಪಶು ಸಂಗೋಪನಾ ಇಲಾಖೆ ಹಾಗೂ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಸಭೆಗೆ ಗೈರಾಗಿದ್ದಕ್ಕಾಗಿ ನೋಟೀಸ್ ನೀಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಈಶ್ವರ ಕಾಂದೂ ಸೂಚನೆ ನೀಡಿದರು.

ಅವರಿಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಬ್ಯಾಂಕರ್‌ಗಳ ಜಿಲ್ಲಾ ಸಮಾಲೋಚನಾ ಹಾಗೂ ಜಿಲ್ಲಾ ಪಟ್ಟದ ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಇತ್ತೀಚೆಗೆ ಜಿಲ್ಲೆಗೆ ಕೇಂದ್ರ ಹಣಕಾಸು ಸಚಿವರು ಆಗಮಿಸಿದ್ದರು. ಜಿಲ್ಲೆಯಲ್ಲಿ ಸರ್ಕಾರದ ಯೋಜನೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಹಣಕಾಸು ಸೌಲಭ್ಯಕ್ಕೆ ಸಂಬಂಧಿಸಿದಂತೆ ಸಾಕಷ್ಟು ದೂರುಗಳಿದ್ದು, ಸಮಸ್ಯೆಗಳ ಬಗ್ಗೆ ಗಮನಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ನೀಟ್ ಪರೀಕ್ಷಾ ಅಕ್ರಮ-ವಿದ್ಯಾರ್ಥಿಗಳ ಆತ್ಮಹತ್ಯೆ, ಚಿಂತೆಯೇ ಇಲ್ಲದ ಪ್ರಧಾನಿ!

ಪರೀಕ್ಷೆ ನಡೆಸುವ ಹೊಣೆ ಹೊತ್ತ ಸಂಸ್ಥೆ ಎನ್‌ಟಿಎ ಪ್ರಶ್ನೆ ಪತ್ರಿಕೆ ಸೋರಿಕೆಯ ಹೊಣೆ ಹೊರಲೇ ಇಲ್ಲ. ಉನ್ನತ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನರೂ ಹೊಣೆ ಹೊತ್ತಿಲ್ಲ. ಕೇಂದ್ರ ಸರ್ಕಾರಕ್ಕಂತು ಯಾವುದರ ಹೊಣೆ ಹೊತ್ತು ಅಭ್ಯಾಸವೇ ಇಲ್ಲ, ನೈತಿಕ ಹೊಣೆ ಎಂಬ ಪದ ಮರೆತೇ ಹೋಗಿದೆ. ಪ್ರಧಾನಿ ಮೋದಿಯವರು ಅದಕ್ಕೂ ತನಗೂ ಸಂಬಂಧವೇ ಇಲ್ಲ ಎಂಬಂತೆ ಯಥಾಪ್ರಕಾರ ವಿದೇಶ ಪ್ರಯಾಣದಲ್ಲಿ ನಿರತರಾಗಿದ್ದಾರೆ.

ಮೇ 3ರಂದು ನಡೆದಿದ್ದ ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಲೀಕ್ ಆಗಿರುವ ಆಘಾತಕಾರಿ ವಿಚಾರ ಮೇ 12ರಂದು ಬಹಿರಂಗಗೊಂಡಿತ್ತು. ತಕ್ಷಣ ಎನ್‌ಟಿಎ ಪರೀಕ್ಷೆಯನ್ನು ರದ್ದುಗೊಳಿಸಿ ಮರು ಪರೀಕ್ಷೆ ನಡೆಸುವ ನಿರ್ಧಾರ ಪ್ರಕಟಿಸಿತ್ತು. ಸುಮಾರು 22-23 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ವರ್ಷಗಳ ಕಾಲ ಪರೀಕ್ಷೆಗೆ ತಯಾರಾಗಿ ಪರೀಕ್ಷೆ ಬರೆದು ನಿರಾಳವಾಗಿದ್ದ ವಿದ್ಯಾರ್ಥಿಗಳಿಗೆ ಈ ಮರು ಪರೀಕ್ಷೆ ಎಂಬ ಪದ ಬರ ಸಿಡಿಲಿನಂತಾಗಿತ್ತು. ಮರುಪರೀಕ್ಷೆ ಬರೆಯಬೇಕೆಂಬ ಒತ್ತಡಕ್ಕೆ ಸಿಲುಕಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಇದುವರೆಗೆ 11 ವಿದ್ಯಾರ್ಥಿಗಳು ನೇಣಿಗೆ ಕೊರಳೊಡ್ಡಿದ್ದಾರೆ. ಆದರೂ ಪರೀಕ್ಷೆಯ ಹೊಣೆ ಹೊತ್ತ ಸಂಸ್ಥೆ ಎನ್‌ಟಿಎ, ಸೋರಿಕೆಯ ಹೊಣೆ ಹೊರಲೇ ಇಲ್ಲ. ಕೇಂದ್ರ ಸರ್ಕಾರದ ಉನ್ನತ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಕೂಡ ಹೊಣೆಗಾರಿಕೆಯಿಂದ ನುಣುಚಿಕೊಂಡು ನಿರುಮ್ಮಳವಾಗಿದ್ದಾರೆ. ಮೋದಿ ಸರ್ಕಾರಕ್ಕಂತೂ ಯಾವುದೇ ಹೊಣೆ ಹೊತ್ತು ಅಭ್ಯಾಸವೇ ಇಲ್ಲ, ನೈತಿಕ ಹೊಣೆ ಎಂಬ ಪದ ಅದರ ನಿಘಂಟಿನಲ್ಲೇ ಇಲ್ಲ. ಪ್ರಧಾನಿ ಮೋದಿಯವರು ಅದಕ್ಕೂ ತನಗೂ ಸಂಬಂಧವೇ ಇಲ್ಲ ಎಂಬಂತೆ ತಮ್ಮ ವಿದೇಶ ಪ್ರಯಾಣದಲ್ಲಿ ನಿರತರಾಗಿದ್ದಾರೆ. ಪಾರದರ್ಶಕವಾಗಿ ಪರೀಕ್ಷೆ ನಡೆಸಬೇಕಾಗಿದ್ದ ಎನ್‌ಟಿಎ ಮುಖ್ಯಸ್ಥರು ಶಿಕ್ಷಣ ಸಚಿವರು ಅಧಿಕಾರದ ಅಮಲಿನಲ್ಲೆ ಮೈಮರೆತಿದ್ದಾರೆ. ಅದಕ್ಕೆ ಬದಲಾಗಿ ಪ್ರಶ್ನೆ ಪತ್ರಿಕೆಗಳು ಶೇರ್ ಆಗಿದ್ದ ಟೆಲಿಗ್ರಾಮ್ ಆ್ಯಪ್ ಅನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ದೆಹಲಿ ಹೈಕೋರ್ಟ್ ಸರ್ಕಾರದ ಈ ಕ್ರಮವನ್ನು ಎತ್ತಿ ಹಿಡಿದಿದೆ. ಮರು ಪರೀಕ್ಷೆಯ ಪ್ರಶ್ನೆಪತ್ರಿಕೆಯ ಸೋರಿಕೆಯನ್ನೂ ತಡೆಯುವ ಬದ್ಧತೆ ಈ ಸರ್ಕಾರಕ್ಕೆ ಇಲ್ಲ. ಹಂಚಿಕೆಯಾಗುವ ಟೆಲಿಗ್ರ್ಯಾಮ್ ಆ್ಯಪ್ ನ್ನು ಬಂದ್ ಮಾಡಲಾಗಿದೆ. ಎಂತಹ ಹೇಡಿತನದ ನಾಚಿಕೆಗೇಡಿನ ಪರಿಸ್ಥಿತಿಯಿದು?

ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಲಾಗಿದೆ. ರಾಜಸ್ಥಾನ, ಮಹಾರಾಷ್ಟ್ರ, ಹರಿಯಾಣ, ಬಿಹಾರ, ದೆಹಲಿಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿತ್ತೆಂಬ ಅಂಶ ಬಯಲಾಗಿದೆ. ಇವೆಲ್ಲವೂ ಬಿಜೆಪಿ ಆಡಳಿತವಿರುವ ರಾಜ್ಯಗಳು ಎಂಬುದು ಗಮನಾರ್ಹ. ಪ್ರಶ್ನೆ ಪತ್ರಿಕೆ ಸ್ಕ್ಯಾನ್ ಮಾಡಿ ಟೆಲಿಗ್ರಾಮ್‌ನಲ್ಲಿ ಸೋರಿಕೆ ಮಾಡಿದ ಕೋಚಿಂಗ್ ಸೆಂಟರ್ ಮಾಲೀಕರ ಬಂಧನ ಮಾಡಲಾಗಿದೆ. ಪ್ರಶ್ನೆ ಪತ್ರಿಕೆ ಮುದ್ರಣ ಮತ್ತು ಸಾಗಾಟದ ಸಂದರ್ಭದಲ್ಲಿ ಸೋರಿಕೆಯಾಗಿದೆ ಎಂದು ಹೇಳಲಾಗಿದೆ. ನೀಟ್ ಪ್ರಶ್ನೆ ಪತ್ರಿಕೆ ಕಳೆದ ಆರು ವರ್ಷಗಳಲ್ಲಿ ಮೂರನೇ ಬಾರಿ ಲೀಕ್ ಆಗಿದೆ. 2024ರಲ್ಲೂ ಆಗಿತ್ತು. ಆದರೆ, ಸಂಬಂಧಪಟ್ಟವರು ಪಾಠ ಕಲಿತೇ ಇಲ್ಲ. ಈ ಬಾರಿಯೂ ಕೇಂದ್ರ ಸರ್ಕಾರ, ಎನ್‌ಟಿಎ ತಮ್ಮ ಬೇಜವಾಬ್ದಾರಿತನ ಮುಂದುವರಿಸಿವೆ. ಪ್ರಶ್ನೆ ಪತ್ರಿಕೆ ಲೀಕ್ ಆಗಿರುವ ಬಗ್ಗೆ ಪ್ರಧಾನಿ ಒಂದು ಮಾತೂ ಆಡಿಲ್ಲ. ಮನ್ ಕೀ ಬಾತ್‌ನಲ್ಲೂ ವಿದ್ಯಾರ್ಥಿಗಳಿಗೆ ಧೈರ್ಯ ತುಂಬುವ ಕೆಲಸ ಮಾಡಿಲ್ಲ. ಇಂತಹ ಪ್ರಧಾನಿ ಮೋದಿಯವರು ಪ್ರತಿವರ್ಷ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳೊಂದಿಗೆ ಪರೀಕ್ಷಾ ಪೇ ಚರ್ಚಾ ಎಂದು ಕಾರ್ಯಕ್ರಮ ನಡೆಸುತ್ತಿರುವುದು ತಮಾಷೆಯಾಗಿದೆ.

ಪ್ರಕರಣ ಸಂಬಂಧ ಅರ್ಜಿ ವಿಚಾರಣೆ ನಡೆಸುತ್ತಿರುವ ಸುಪ್ರೀಂ ಕೋರ್ಟ್‌ಗೆ ''ಪ್ರಧಾನಿಯವರೇ ಖುದ್ದು ಮರು ಪರೀಕ್ಷೆಯ ಮೇಲೆ ನಿಗಾ ಇಡಲಿದ್ದಾರೆ'' ಎಂದು ಕೇಂದ್ರ ಸರ್ಕಾರ ಹೇಳಿದೆ. ಇದೇ ಮೊದಲ ಬಾರಿಗೆ ಮರುಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಸೇನಾ ಕಾರ್ಯಚರಣೆಯ ಮೂಲಕ ಸೇನಾ ಹೆಲಿಕಾಪ್ಟರ್‌ನಲ್ಲಿ ಪ್ರಶ್ನೆ ಪತ್ರಿಕೆಯನ್ನು ರವಾನಿಸಲಿದೆಯಂತೆ! ಒಂದು ಪರೀಕ್ಷೆ ನಡೆಸಲು ಸೇನೆಯನ್ನು ಬಳಸುತ್ತಿರುವುದು ನಾಚಿಕೆಗೇಡಿನ ಸಂಗತಿ. ಕಳೆದ ಹನ್ನೆರಡು ವರ್ಷಗಳಿಂದ ಅಕ್ರಮ ನಡೆಸಿಯೇ ಗೆಲ್ಲುತ್ತಿರುವ ಬಿಜೆಪಿ, ತಮ್ಮ ಪಕ್ಷ ಗೆಲ್ಲಲು ಸಾಧ್ಯವೇ ಇಲ್ಲ ಎಂಬ ಪರಿಸ್ಥಿತಿ ಇದ್ದಾಗಲೂ ಆ ರಾಜ್ಯಗಳಲ್ಲಿ ಹೇಗೆ ಗೆಲ್ಲಬೇಕು ಎಂಬ ಕಲೆ ಪರಿಣತಿ ಗಳಿಸಿರುವ ಮೋದಿಯವರಿಗೆ ಒಂದು ಪರೀಕ್ಷೆಯನ್ನು ನಡೆಸಲು ಸಾಧ್ಯವಾಗಿಲ್ಲ ಎಂಬುದು ಸೋಜಿಗದ ಸಂಗತಿ. ಸಾಂವಿಧಾನಿಕ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ಅಕ್ರಮವಾಗಿಯೇ ಚುನಾವಣೆಗಳನ್ನು ಗೆಲ್ಲುತ್ತಿರುವಾಗ ಅವರಿಗೆ ನೀಟ್ ಪರೀಕ್ಷಾ ಅಕ್ರಮ, ಅದರಿಂದಾಗಿ ಯುವಜನರಲ್ಲಿ ಉಂಟಾಗಿರುವ ಆತಂಕ, ಆತ್ಮಹತ್ಯೆ ಹಾದಿ ಹಿಡಿದಿರುವ ಬಗ್ಗೆ ಯಾವುದೇ ಕಳವಳ ಉಂಟಾಗಲು ಸಾಧ್ಯವೇ ಇಲ್ಲ.

ಈ ಪ್ರಕರಣ ಬಯಲಾಗಿ ಒಂದು ತಿಂಗಳಾಗಿದೆ. ಕೇಂದ್ರ ಸರ್ಕಾರ ನಡೆದುಕೊಂಡ ರೀತಿ ನಮ್ಮ ಮುಂದಿದೆ. ಬಿಜೆಪಿ ಬೆಂಬಲಿಗರು, ಮಾಧ್ಯಮಗಳು ನೀಟ್ ಅಕ್ರಮದ ವಿರುದ್ಧ ಬೀದಿಗಿಳಿದು ಹೋರಾಟ ನಡೆಸುತ್ತಿರುವ ಯುವ ಸಮೂಹವನ್ನು ನಡೆಸಿಕೊಳ್ಳುತ್ತಿರುವ ರೀತಿ, ಕಾಕ್ರೋಚ್ ಜನತಾ ಪಾರ್ಟಿಯ ಯುವ ಮುಖಂಡರ ಮೇಲೆ ನಡೆಸುತ್ತಿರುವ ದಾಳಿ, ಅಪಪ್ರಚಾರ ಫ್ಯಾಸಿಸ್ಟ್ ಸರ್ಕಾರದ ದುರಾಡಳಿತಕ್ಕೆ ಕನ್ನಡಿ ಹಿಡಿದಿದೆ. ಈ ಮಧ್ಯೆ ನೆಹರೂ ಅವರಿಗಿಂತ ಹೆಚ್ಚು ದಿನಗಳು ಅಧಿಕಾರದಲ್ಲಿರುವ ಬಗ್ಗೆ ಬಿಜೆಪಿ ಸಂಭ್ರಮಾಚರಣೆಯಲ್ಲಿ ತೊಡಗಿದೆ. ಟಿವಿ ಮಾಧ್ಯಮಗಳಲ್ಲಿ ಮೋದಿ ಯೋಜನೆಗಳ ಪ್ರಚಾರ ನಡೆಯುತ್ತಿದೆ. ಪತ್ರಿಕೆಗಳಲ್ಲಿ ಪುಟಗಟ್ಟಲೆ ಜಾಹೀರಾತು ಪ್ರಕಟವಾಗುತ್ತವೆ. ಸಬ್ ಚೆಂಗಾಸಿ ಎಂಬ ಮನಸ್ಥಿತಿಯಲ್ಲಿ ಬಿಜೆಪಿ ಬೆಂಬಲಿಗರಿದ್ದಾರೆ. ಮೋದಿ ಸರ್ಕಾರ ಇಂಧನ, ಸಿಲಿಂಡರ್ ಬೆಲೆ ಹೆಚ್ಚಿಸಿದರೆ ದೇಶಕ್ಕೋಸ್ಕರ ಎಂದು ಬೆಂಬಲಿಸುವ ಪಡೆ ಇದೆ. ನೀಟ್ ಅಕ್ರಮದ ವಿರುದ್ಧ ಮಾತನಾಡಿದರೆ 2014ರ ಹಿಂದೆ ಆದ ಅಕ್ರಮದ ಪಟ್ಟಿ ಮಾಡುತ್ತಿದ್ದಾರೆ!

ದೇಶವೊಂದರ ಶಿಕ್ಷಣ ವ್ಯವಸ್ಥೆ ಆ ದೇಶವನ್ನು ಮುನ್ನಡೆಸುತ್ತಿರುವವರ ಮನಸ್ಥಿತಿ ಅವಲಂಬಿಸಿರುತ್ತದೆ. ಶಿಕ್ಷಣ ವ್ಯವಸ್ಥೆ ಹದಗೆಡಲು ಆಡಳಿತ ನಡೆಸುತ್ತಿರುವವರ ವೈಫಲ್ಯವೂ ಕಾರಣ. ಅಧಿಕಾರಕ್ಕೆ ಬರುತ್ತಿದ್ದಂತೆ ಪಠ್ಯಪುಸ್ತಕಗಳ ಕೇಸರೀಕರಣಕ್ಕೆ ಮುಂದಾದ ಬಿಜೆಪಿ, ತನ್ನ ಬೆಂಬಲಿಗರನ್ನು ವಿಶ್ವವಿದ್ಯಾಲಯಗಳ ಆಯಕಟ್ಟಿನ ಜಾಗಗಳಲ್ಲಿ ನೇಮಿಸಿದ್ದಾರೆ. ಹೀಗಾಗಿ ವಿವಿ ಕ್ಯಾಂಪಸ್‌ಗಳು, ಶಿಕ್ಷಣ ಸಂಸ್ಥೆಗಳಲ್ಲಿ ಕೇಸರಿ ರಾಜಕೀಯ ನುಸುಳಿದೆ. ನೀಟ್‌ನಂತಹ ಬಹಳ ಪಾರದರ್ಶಕವಾಗಿ ನಡೆಯಬೇಕಾಗಿದ್ದ ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳು ಕೋಚಿಂಗ್ ಸೆಂಟರ್‌ಗಳಿಗೆ ಸುಲಭವಾಗಿ ಸಿಗುತ್ತಿವೆ. ಕೋಚಿಂಗ್ ಸೆಂಟರ್‌ಗಳನ್ನು ಅವಲಂಬಿಸದೇ, ಸ್ವಂತ ಪರಿಶ್ರಮದಿಂದ ಪರೀಕ್ಷೆಗೆ ತಯಾರಿ ನಡೆಸುವ ಬಡ, ಗ್ರಾಮೀಣ ವಿದ್ಯಾರ್ಥಿಗಳಿಗೆ ಸೀಟು ಸಿಗದೇ ಉನ್ನತ ಶಿಕ್ಷಣದಿಂದ ವಿಮುಖರನ್ನಾಗಿ ಮಾಡುತ್ತಿದೆ.

ನೊಂದ ನೀಟ್ ವಿದ್ಯಾರ್ಥಿಗಳ ಪರ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ನಿಂತಿದ್ದಾರೆ. ದೇಶದ ಅತಿ ದೊಡ್ಡ ಕೋಚಿಂಗ್ ಸೆಂಟರ್ ರಾಜಧಾನಿ ಎಂದೇ ಕರೆಸಿಕೊಳ್ಳುವ ಕೋಟದಲ್ಲಿ ಯುವ ಸಮೂಹದೊಂದಿಗೆ ರಾಹುಲ್ ಗಾಂಧಿ ಸಂವಾದ ನಡೆಸಿದ್ದಾರೆ. ಮತ್ತೊಂದೆಡೆ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಕ್ಕೆ ತಲಾ ಒಂದು ಕೋಟಿ ರೂಪಾಯಿ ಪರಿಹಾರ ನೀಡಬೇಕು ಎಂಬ ಒತ್ತಾಯವೂ ಕೇಳಿ ಬಂದಿದೆ. ಏನೇ ಆದರೂ ಸರ್ಕಾರದ ನಿರ್ಲಕ್ಷ್ಯದಿಂದ ಕಳೆದುಕೊಂಡ ಪ್ರಾಣ ಮತ್ತೆ ಬಾರದು. ಮಕ್ಕಳನ್ನು ಕಳೆದುಕೊಂಡ ಹೆತ್ತವರ ನೋವು ಶಮನವಾಗುವ ಔಷಧಿ ಇನ್ನೂ ಕಂಡು ಹಿಡಿದಿಲ್ಲ. ಆದರೆ, ಈ ಘಟನೆಯಿಂದ ಪಾಠ ಕಲಿತರೆ, ಭವಿಷ್ಯದಲ್ಲಿ ಇಂತಹ ಪ್ರಮಾದವಾದಂತೆ ಎಚ್ಚರಿಕೆ ವಹಿಸುವುದು ಸಾಧ್ಯ.

ಗದಗ: ಎಚ್ ಕೆ ಪಾಟೀಲ್ / ಜಿ ಎಸ್ ಪಾಟೀಲ್: ಸಚಿವ ಸ್ಥಾನಕ್ಕೆ ಪೈಪೋಟಿ


ಗದಗ ಜಿಲ್ಲೆಯ ಹಿರಿಯ ಶಾಸಕ ಎಚ್ ಕೆ ಪಾಟೀಲ್ ಮತ್ತು ರೋಣ ಶಾಸಕ ಜಿ ಎಸ್ ಪಾಟೀಲ್ ಅವರ ನಡುವಿನ ಸಚಿವ ಸ್ಥಾನಕ್ಕಾಗಿನ ಪೈಪೋಟಿ ನಡೆಯುತ್ತಿರುವುದು, ರಾಜ್ಯ ಕಾಂಗ್ರೆಸ್‌ನಲ್ಲಿ ಜಿಲ್ಲಾ ಮತ್ತು ವ್ಯಕ್ತಿ ನಿಷ್ಠೆಯ ರಾಜಕೀಯವನ್ನು ಮತ್ತೊಮ್ಮೆ ಬಯಲು ಮಾಡಿದೆ. ಕಾರ್ಯಕರ್ತರು ಹಾಗೂ ಬೆಂಬಲಿಗರು ನಡೆಸುತ್ತಿರುವ ಪ್ರತಿಭಟನೆಗಳು, ಅಭಿಯಾನಗಳು ಪಕ್ಷದ ವರಿಷ್ಠರ ಮೇಲೆ ಗಣನೀಯ ಒತ್ತಡವನ್ನು ಹೇರಿದ್ದು, ಡಿ ಕೆ ಶಿವಕುಮಾರ್ ನೇತೃತ್ವದ ನೂತನ ಸರ್ಕಾರಕ್ಕೆ ಸವಾಲು ಒಡ್ಡುತ್ತಿವೆ.

ಸಿದ್ದರಾಮಯ್ಯನವರು ಸಿಎಂ ಸ್ಥಾನಕ್ಕೆ ರಾಜಿನಾಮೆ ನೀಡಿದ ಬಳಿಕ ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಡಿ ಕೆ ಶಿವಕುಮಾರ್ ಅಧಿಕಾರ ಸ್ವೀಕರಿಸಿ ನೂತನ ಸಚಿವ ಸಂಪುಟ ರಚನೆ ಮತ್ತು ಸಂಪುಟ ವಿಸ್ತರಣೆ ವೇಳೆ ಅನೇಕ ಚರ್ಚೆಗಳಾಗುತ್ತಿರುವಾಗಲೇ ಗದಗ ಜಿಲ್ಲೆಯ ಇಬ್ಬರು ನಾಯಕರ ಸಚಿವ ಸ್ಥಾನಕ್ಕೆ ಪೈಪೋಟಿ ನಡೆಸಿದಿದೆ.

ಸಿದ್ದರಾಮಯ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಪ್ರಭಾವಿ ಹಾಗೂ ಪ್ರಮುಖ ಸಚಿವರಾಗಿ ಗುರುತಿಸಿಕೊಂಡಿದ್ದ ಎಚ್ ಕೆ ಪಾಟೀಲ್ ಅವರಿಗೆ ನೂತನ ಸಿಎಂ ಡಿ ಕೆ ಶಿವಕುಮಾರ ಸಚಿವ ಸಂಪುಟದ ಮೊದಲ ಹಂತದಲ್ಲಿ ಸಚಿವ ಸ್ಥಾನ ದೊರೆತಿಲ್ಲ.

ಗದಗ ಶಾಸಕ ಎಚ್ ಕೆ ಪಾಟೀಲ್ ಮತ್ತು ರೋಣ ಶಾಸಕ ಜಿ ಎಸ್ ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಇಬ್ಬರು ಶಾಸಕರ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಬೆಂಬಲಿಗರು ರಾಜ್ಯ ಮತ್ತು ರಾಷ್ಟ್ರೀಯ ನಾಯಕರ ಗಮನ ಸೆಳೆಯಲು ವಿವಿಧ ರೀತಿಯ ಪ್ರತಿಭಟನೆ, ಅಭಿಯಾನಗಳನ್ನು ನಡೆಸಿದ್ದು, ಕಾಂಗ್ರೆಸ್ ಪಕ್ಷದ ವರಿಷ್ಠರ ಮೇಲೆ ಒತ್ತಡ ತರುತ್ತಿದ್ದಾರೆ.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಎಚ್ ಕೆ ಪಾಟೀಲರು ಪ್ರಭಾವಿ ನಾಯಕರಾಗಿದ್ದು, ಕಾನೂನು ಮತ್ತು ಸಂಸದೀಯ ಸಚಿವರಾಗಿದ್ದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರಾಗಿಯೂ ಕಾರ್ಯನಿರ್ವಹಿಸಿದ್ದರು. ಈ ಹಿಂದೆ ಕಾಂಗ್ರೆಸ್ ಸರ್ಕಾರ ಅಸ್ತಿತ್ವದಲ್ಲಿದ್ದಾಗ ವಿವಿಧ ಖಾತೆಗಳನ್ನು ನಿಭಾಯಿಸಿದ್ದರು. ಕಾಂಗ್ರೆಸ್ ಪಕ್ಷದಲ್ಲಿ ಪ್ರಭಾವಿ ರಾಜಕಾರಣಿ ಹಾಗೂ ಮುತ್ಸದ್ದಿ ನಾಯಕರಾಗಿ ಗುರುತಿಸಿಕೊಂಡಿದ್ದ ಎಚ್ ಕೆ ಪಾಟೀಲ್ ಅವರಿಗೆ



ಮೊದಲ ಹಂತದ ಸಚಿವ ಸಂಪುಟದಲ್ಲಿ ಸ್ಥಾನ ಸಿಗುವ ಅಪಾರ ನಿರೀಕ್ಷೆ ಇತ್ತು.

ಹೊಸ ಸಚಿವ ಸಂಪುಟದಲ್ಲಿ ಎಚ್ ಕೆ ಪಾಟೀಲ್ ಅವರಿಗೆ ಸಚಿವ ಸ್ಥಾನ ಸಿಗಬೇಕು. ಉಪಮುಖ್ಯಮಂತ್ರಿ ಮಾಡಬೇಕೆಂದು ಜಿಲ್ಲೆಯ ರಾಜಕೀಯ ದುರೀಣರು, ವಿವಿಧ ಸಮಾಜದ ಮುಖಂಡರು ಒತ್ತಾಯಿಸಿದ್ದಾರೆ. ಮೊದಲ ಹಂತದ ಸಚಿವ ಸಂಪುಟದಲ್ಲಿ ಎಚ್ ಕೆ ಪಾಟೀಲ್ ಅವರ ಹೆಸರು ಇಲ್ಲದಿರುವುದರಿಂದ ಬೆಂಬಲಿಗರು, ಅಭಿಮಾನಿಗಳು, ಸಮುದಾಯದ ಮುಖಂಡರು ಬೇಸರ ವ್ಯಕ್ತಪಡಿಸಿದ್ದಾರೆ. ಎರಡನೇ ಹಂತದಲ್ಲಾರೂ ಸಚಿವ ಸ್ಥಾನ ಸಿಗಬೇಕು ಎಂದು ಆಗಹಿಸಿದ್ದಾರೆ.

2024ರಲ್ಲಿ ವಿವಿಧ ಕಾಮಗಾರಿ ಉದ್ಘಾಟನಾ ಕಾರ್ಯಕ್ರಮಕ್ಕೆಂದು ರೋಣ ಕ್ಷೇತ್ರಕ್ಕೆ ಆಗಮಿಸಿದ್ದ ಸಿದ್ದರಾಮಯ್ಯನವರು ಜಿ ಎಸ್ ಪಾಟೀಲ್ ಅವರು ಸಚಿವ ಸ್ಥಾನಕ್ಕೆ ಅರ್ಹರಿದ್ದಾರೆ ಎಂದು ಹೇಳಿದ್ದರು. ಈಗ ಡಿ ಕೆ ಶಿವಕುಮಾರ ಅವರು ನೂತನವಾಗಿ ಸಿಎಂ ಆದ ನಂತರ ಜಿಲ್ಲೆಯಲ್ಲಿ ಸಚಿವ ಸ್ಥಾನಕ್ಕೆ ಶಾಸಕ ಜಿ ಎಸ್ ಪಾಟೀಲ ಬೆಂಬಲಿಗರು, ಕಾರ್ಯಕರ್ತರು ಸಚಿವ ಸ್ಥಾನ ಕೊಡಲೇಬೇಕೇಂದು ರೋಣ ಕ್ಷೇತ್ರದಲ್ಲಿ ವಿಭಿನ್ನ ರೀತಿಯಲ್ಲಿ ಪ್ರತಿಭಟನೆ ನಡೆಸಿದ್ದಾರೆ.

ಜಿ ಎಸ್ ಪಾಟೀಲ್ ಅವರು ರೋಣ ವಿಧಾನಸಭಾ ಕ್ಷೇತ್ರದಿಂದ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅನುಭವ ಹೊಂದಿದ ಹಿರಿಯ ರಾಜಕಾರಣಿಗಳಾಗಿದ್ದು, ಈ ಬಾರಿಯಾದಾರೂ ಜಿ ಎಸ್ ಪಾಟೀಲ್ ಅವರಿಗೆ ಸಚಿವ ಸ್ಥಾನ ಸಿಗಲೇಬೇಕೇಂದು ಹಠಕ್ಕೆ ಬಿದ್ದ ಅವರ ಬೆಂಬಲಿಗರು, ಅಭಿಮಾನಿಗಳು ಪ್ರತಿಭಟನೆ ನಡೆಸಿದ್ದಾರೆ, ತುಮಕೂರಿನಿಂದ ಬೆಂಗಳೂರಿನವರೆಗೂ ಪಾದಯಾತ್ರೆ ಹೊರಟು ವರಿಷ್ಟರ ಮೇಲೆ ಒತ್ತಡ ತರುತ್ತಿದ್ದಾರೆ.

ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಯುವ ಮುಖಂಡ ಸಿದ್ದು ಪಾಟೀಲ್ ಅವರು ಈ ದಿನ.ಕಾಮ್ ಜತೆಗೆ ಮಾತನಾಡಿ, ''ಅಖಂಡ ಕರ್ನಾಟಕಕ್ಕೆ ಎಚ್ ಕೆ ಪಾಟೀಲರು ಕೊಡುಗೆ ನೀಡಿದ್ದು, ಈ ಸಚಿವ ಸಂಪುಟದಲ್ಲಿ ಕಡೆಗಣಿಸಿರುವುದು ನೋವಿನ ಸಂಗತಿ. ಎರಡನೇ ಹಂತದ ಸಚಿವ ಸಂಪುಟದಲ್ಲಿ ಉಪಮುಖ್ಯಮಂತ್ರಿ ಸ್ಥಾನ ನೀಡುವ ಜೊತೆಗೆ ಸಚಿವ ಸ್ಥಾನ ಕೊಟ್ಟು, ಪ್ರಾದೇಶಿಕ ಅಸಮಾನತೆಯನ್ನು ಹೋಗಲಾಡಿಸಬೇಕು. ಮತ್ತೆ ಈಗ ಒಂದೊಂದು ಜಿಲ್ಲೆಗೆ ಎರಡು ಸಚಿವ ಸ್ಥಾನ ಕೊಡುತ್ತಿದ್ದಾರೆ. ಎಚ್ ಕೆ ಪಾಟೀಲ್ ಅವರ ಜತೆಗೆ ರೋಣ ಶಾಸಕ ಜಿ ಎಸ್ ಪಾಟೀಲರಿಗೂ ಸಚಿವ ಸ್ಥಾನ ಕೊಡಲಿ. ಆಗ ಗದಗ ಜಿಲ್ಲೆಯನ್ನು ಮತ್ತಷ್ಟು ಅಭಿವೃದ್ಧಿ ಮಾಡಲು ಸಾಧ್ಯವಾಗುತ್ತದೆ. ಜಿ ಎಸ್ ಪಾಟೀಲರೂ ಕೂಡ ಹಿರಿಯ ನಾಯಕರಾಗಿದ್ದು, ಸಾಕಷ್ಟು ಕೆಲಸ ಮಾಡಿದ್ದಾರೆ. ಇಬ್ಬರಿಗೂ ಸಚಿವ ಸ್ಥಾನ ನೀಡಿದರೆ ಜಿಲ್ಲೆಗೆ ಹೆಚ್ಚು ಅನುಕೂಲವಾಗಲಿದೆ'' ಎಂದು ಪ್ರತಿಕ್ರಿಯೆ ನೀಡಿದರು.

ಕಾಂಗ್ರೆಸ್ ಯುವ ಮುಖಂಡ ಸಿದ್ದು ಪಾಟೀಲ್

ಗದಗ ಜಿಲ್ಲೆಯ ಹಿರಿಯ ಶಾಸಕ ಎಚ್ ಕೆ ಪಾಟೀಲ್ ಮತ್ತು ರೋಣ ಶಾಸಕ ಜಿ ಎಸ್ ಪಾಟೀಲ್ ಅವರ ನಡುವಿನ ಸಚಿವ ಸ್ಥಾನಕ್ಕಾಗಿನ ಪೈಪೋಟಿ ನಡೆಯುತ್ತಿರುವುದು, ರಾಜ್ಯ ಕಾಂಗ್ರೆಸ್‌ನಲ್ಲಿ ಜಿಲ್ಲಾ ಮತ್ತು ವ್ಯಕ್ತಿ ನಿಷ್ಠೆಯ ರಾಜಕೀಯವನ್ನು ಮತ್ತೊಮ್ಮೆ ಬಯಲು ಮಾಡಿದೆ. ಕಾರ್ಯಕರ್ತರು ಹಾಗೂ ಬೆಂಬಲಿಗರು ನಡೆಸುತ್ತಿರುವ ಪ್ರತಿಭಟನೆಗಳು, ಅಭಿಯಾನಗಳು ಪಕ್ಷದ ವರಿಷ್ಠರ ಮೇಲೆ ಗಣನೀಯ ಒತ್ತಡವನ್ನು ಹೇರಿದ್ದು, ಡಿ ಕೆ ಶಿವಕುಮಾರ್ ನೇತೃತ್ವದ ನೂತನ ಸರ್ಕಾರಕ್ಕೆ ಸವಾಲು ಒಡ್ಡುತ್ತಿವೆ.

ಸಚಿವ ಸಂಪುಟ ರಚನೆಯಲ್ಲಿ ಜಾತಿ, ಪ್ರದೇಶ ಮತ್ತು ಅನುಭವದ ಸಮತೋಲನ ಸಾಧಿಸುವುದು ಡಿ ಕೆ ಶಿವಕುಮಾರ್ ಅವರಿಗೆ ಪ್ರಮುಖ ಪರೀಕ್ಷೆಯಾಗಿದೆ. ಗದಗ ಜಿಲ್ಲೆಗೆ ಸೂಕ್ತ ಪ್ರಾತಿನಿಧ್ಯ ನೀಡುವ ಮೂಲಕ ಪಕ್ಷದ ಐಕ್ಯತೆಯನ್ನು ಕಾಯ್ದುಕೊಳ್ಳುವುದರ ಜತೆಗೆ, 2028ರ ಚುನಾವಣೆಗೆ ಬಲವಾದ ಬೆಂಬಲವನ್ನು ತಯಾರಿಸುವ ನಿಟ್ಟಿನಲ್ಲಿ ಈ ನಿರ್ಧಾರಗಳು ಮಹತ್ವದ್ದಾಗುತ್ತವೆ. ಈ ಹಿನ್ನೆಲೆಯಲ್ಲಿ ಎರಡನೇ ಹಂತದ ಸಚಿವ ಸಂಪುಟದಲ್ಲಿ ಯಾರಿಗೆ ಸಚಿವ ಸ್ಥಾನ ಸಿಗುತ್ತದೆ ಎಂಬುದನ್ನು ಕಾದು ನೋಡಬೇಕಿದೆ.

ಬೆಳಗಾವಿ ಬಿಜೆಪಿ ಮಾಜಿ ಶಾಸಕನ ರೆಸಾರ್ಟ್‌ಗೆ ಅರಣ್ಯ ಭೂಮಿ: ಅಧಿಕಾರಿಗಳಿಂದಲೇ ಶಿಫಾರಸು

ಸ್ಥಳೀಯ ಬುಡಕಟ್ಟು ಸಮುದಾಯಗಳು, ಸುತ್ತಲಿನ ಗ್ರಾಮಸ್ಥರು ವಿದ್ಯುತ್, ಆರೋಗ್ಯ ರಕ್ಷಣೆ ಮತ್ತು ರಸ್ತೆ ಸಂಪರ್ಕದಂತಹ ಮೂಲಭೂತ ಸೌಲಭ್ಯಗಳನ್ನು ಪಡೆಯಲು ದಶಕಗಳಿಂದ ಹೆಣಗಾಡುತ್ತಿದ್ದಾರೆ. ಆದರೆ ಅವರ ಮನವಿಗೆ ಸ್ಪಂದಿಸದ ಅರಣ್ಯ ಇಲಾಖೆ ಅಧಿಕಾರಿಗಳು, ಮಾಜಿ ಶಾಸಕನ ರೆಸಾರ್ಟ್‌ಗೆ, ತಾವೇ ಮುಂದೆ ನಿಂತು ಅರಣ್ಯ ಭೂಮಿ ವರ್ಗಾವಣೆ ಮಾಡುತ್ತಿರುವುದು ವಿವಾದಕ್ಕೆ ಕಾರಣವಾಗಿದೆ.

ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಕನಕುಂಬಿ ಗ್ರಾಮದಲ್ಲಿ ಖಾಸಗಿ ರೆಸಾರ್ಟ್‌ಗೆ ರಸ್ತೆ ನಿರ್ಮಾಣ ಮತ್ತು ವಿದ್ಯುತ್ ಸರಬರಾಜಿಗೆ ಬಳಸಲು 0.0642 ಹೆಕ್ಟೇರ್ ಅರಣ್ಯ ಭೂಮಿ ವರ್ಗಾವಣೆ ಮಾಡಲು, ಬೆಳಗಾವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ() ಶಿಫಾರಸು ಮಾಡಿರುವುದು ದೊಡ್ಡ ವಿವಾದಕ್ಕೆ ಕಾರಣವಾಗಿದೆ. ಅಲ್ಲದೆ ಅರಣ್ಯ ಇಲಾಖೆಯ ಇಬ್ಬಗೆ ನೀತಿಯನ್ನು ಬಯಲು ಮಾಡಿದೆ.

ಬೆಳಗಾವಿ ಉತ್ತರದ ಮಾಜಿ ಶಾಸಕ ಅನಿಲ್ ಬೆನಕೆ ಅಭಿವೃದ್ಧಿಪಡಿಸುತ್ತಿರುವ ಖಾಸಗಿ ರೆಸಾರ್ಟ್‌ಗೆ ತೆರಳಲು ರಸ್ತೆ ಸಂಪರ್ಕ ಮತ್ತು ವಿದ್ಯುತ್ ಕಂಬಗಳನ್ನು ಅಳವಡಿಸಲು ಅರಣ್ಯ ಭೂಮಿ ವರ್ಗಾವಣೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಡಿಸಿಎಫ್ ಅಧಿಕಾರಿ ಎನ್.ಇ. ಕ್ರಾಂತಿ, ಈ ಪ್ರಸ್ತಾವನೆಗೆ ಶಿಫಾರಸು ನೀಡಿದ್ದಾರೆ.

ಅಪರೂಪದ ಪ್ರಭೇದಗಳಿರುವ ಸೂಕ್ಷ್ಮ ಸಂರಕ್ಷಣಾ ವಲಯದ ವ್ಯಾಪ್ತಿಯಲ್ಲಿ ಈ ಭೂಮಿ ಬರುತ್ತದೆ. ಆದರೂ ಇಲ್ಲಿ ರಸ್ತೆ ಮತ್ತು ವಿದ್ಯುತ್ ಕಂಬಗಳನ್ನು ಅಳವಡಿಸುವುದರಿಂದ ಅರಣ್ಯ ಮತ್ತು ವನ್ಯಜೀವಿಗಳ ಮೇಲೆ ಯಾವುದೇ ರೀತಿಯ ದುಷ್ಪರಿಣಾಮ ಬೀರುವುದಿಲ್ಲ ಎಂದು ಡಿಸಿಎಫ್ ಸಮರ್ಥಿಸಿಕೊಂಡಿದ್ದರು.

ಭೀಮಗಡ ವನ್ಯಜೀವಿ ಅಭಯಾರಣ್ಯ ಮತ್ತು ಸುತ್ತಮುತ್ತಲಿನ ಪ್ರದೇಶಗಳು ಸೇರಿದಂತೆ ಖಾನಾಪುರ ತಾಲೂಕಿನಾದ್ಯಂತ ನಿವಾಸಿಗಳು ವಿದ್ಯುತ್, ಆರೋಗ್ಯ ರಕ್ಷಣೆ ಮತ್ತು ರಸ್ತೆ ಸಂಪರ್ಕದಂತಹ ಮೂಲಭೂತ ಸೌಲಭ್ಯಗಳನ್ನು ಪಡೆಯಲು ದಶಕಗಳಿಂದ ಹೆಣಗಾಡುತ್ತಿದ್ದಾರೆ. ಕನಕುಂಬಿ ಶ್ರೇಣಿ ವ್ಯಾಪ್ತಿಯ ಅರಣ್ಯವಾಸಿಗಳು ಮೂಲಸೌಕರ್ಯಕ್ಕಾಗಿ ಬೇಡಿಕೆಗಳನ್ನು ಸಲ್ಲಿಸಿದಾಗ, ಪರಿಸರ ಕಾಳಜಿ, ಅರಣ್ಯ ಸಂರಕ್ಷಣೆಯ ನೆಪ ಹೇಳಿ ಅಧಿಕಾರಿಗಳು ನಿವಾಸಿಗಳ ಅನುಮತಿಗಳನ್ನು ನಿರಾಕರಿಸಿದ್ದಾರೆ. ಹೀಗಿರುವಾಗ ಮಾಜಿ ಶಾಸಕನ ಖಾಸಗಿ ರೆಸಾರ್ಟ್ ರಸ್ತೆ ಸಂಪರ್ಕಕ್ಕೆ ಸಂಬಂಧಿಸಿದ ಪ್ರಸ್ತಾವನೆ ಶಿಫಾರಸು ದೊರೆತಿರುವುದರಿಂದ ಈ ಪ್ರಕರಣ ಟೀಕೆಗೆ ಗುರಿಯಾಗಿದೆ. ಅಲ್ಲದೆ ದೊಡ್ಡ ವಿವಾದವನ್ನು ಸೃಷ್ಟಿಸಿದೆ.

ಸ್ಥಳೀಯರ ಸಮಸ್ಯೆ ಮತ್ತು ಅಭಿವೃದ್ಧಿ ನಿರೀಕ್ಷೆ

ಈ ಬಗ್ಗೆ ಜಂಬೋಟಿ ಗ್ರಾಮದ ನಿವಾಸಿ ಶ್ರೀನಾಥ್ ಎಂಬುವವರು ಈ ದಿನ.ಕಾಮ್‌ನೊಂದಿಗೆ ಮಾತನಾಡಿ, ''ಖಾನಾಪುರ ತಾಲೂಕಿನ ಅರಣ್ಯವಾಸಿಗಳು ದಶಕಗಳಿಂದಲೂ ರಸ್ತೆ, ವಿದ್ಯುತ್, ಆರೋಗ್ಯ ಮತ್ತು ಸಂಪರ್ಕ ಸೌಲಭ್ಯಗಳಿಗಾಗಿ ಹೋರಾಡುತ್ತಿದ್ದೇವೆ. ಆದರೆ ಭೀಮಗಡ ವನ್ಯಜೀವಿ ಅಭಯಾರಣ್ಯ ಸುತ್ತಮುತ್ತಲಿನ ಪ್ರದೇಶ ಸೂಕ್ಷ್ಮ ಪ್ರದೇಶವೆಂದು ಬೇಡಿಕೆಗಳನ್ನು ತಿರಸ್ಕರಿಸಲಾಗುತ್ತಿದೆ. ಆದರೆ ಖಾಸಗಿ ವಾಣಿಜ್ಯ ಯೋಜನೆಗೆ ಅನುಕೂಲ ಮಾಡಿಕೊಡುವುದು ಇಬ್ಬಗೆ ನೀತಿಯಾಗಿದೆ'' ಎಂದು ಆರೋಪಿಸಿದರು.

''ಖಾನಾಪುರ ತಾಲೂಕಿನ ಅರಣ್ಯ ಪ್ರದೇಶಗಳಲ್ಲಿ ವಾಸಿಸುವ ನಮಗೆ ಮೂಲ ಸೌಲಭ್ಯಗಳನ್ನು ಒದಗಿಸದೆ ಅರಣ್ಯ ಸಂರಕ್ಷಣೆ



ಮಾಡುವುದಾಗಿ ಹೇಳುವ ಅರಣ್ಯ ಅಧಿಕಾರಿಗಳು ಖಾಸಗಿ ರೆಸಾರ್ಟ್ ಅಭಿವೃದ್ಧಿಗೆ ಸೌಲಭ್ಯಗಳನ್ನು ಒದಗಿಸುವುದು ಅಸಮಾನತೆಯನ್ನು ಹೆಚ್ಚಿಸುತ್ತದೆ. ಮೊದಲು ಇಲ್ಲಿನ ಗ್ರಾಮಗಳಿಗೆ ಮೂಲ ಸೌಲಭ್ಯಗಳನ್ನು ಒದಗಿಸಿ, ನಂತರ ವಾಣಿಜ್ಯ ಯೋಜನೆಗಳನ್ನು ಪರಿಗಣಿಸಬೇಕು'' ಎಂದು ಸ್ಥಳೀಯರು ಆಗ್ರಹಿಸಿದರು.

''ಪಶ್ಚಿಮ ಘಟ್ಟಗಳು ಜೀವ ವೈವಿಧ್ಯತೆಯ ಹಾಟ್‌ಸ್ಪಾಟ್ ಆಗಿದೆ. ಅರಣ್ಯ ಭೂಮಿ ವರ್ಗಾವಣೆಗಳು ದೀರ್ಘಕಾಲದ ಪರಿಣಾಮ ಬೀರಬಹುದು. ರಸ್ತೆ ನಿರ್ಮಾಣ ಮತ್ತು ವಿದ್ಯುತ್ ಲೈನ್‌ಗಳು ವನ್ಯಜೀವಿಗಳ ಓಡಾಟಕ್ಕೆ ಅಡ್ಡಿಯಾಗಬಹುದು, ಪರಿಸರ ಸಮತೋಲನವನ್ನು ಹಾಳುಮಾಡಬಹುದು. ಹಾಗಾಗಿ ರೆಸಾರ್ಟ್‌ಗೆ ಭೂಮಿ ವರ್ಗಾವಣೆ ಶಿಫಾರಸು ಮಾಡಿರುವುದು ಅರಣ್ಯ(ಸಂರಕ್ಷಣೆ) ಕಾಯಿದೆ, ವನ್ಯಜೀವಿ ಸಂರಕ್ಷಣೆ ಕಾಯಿದೆ ಮತ್ತು ರಾಷ್ಟ್ರೀಯ ವನ್ಯಜೀವಿ ಮಂಡಳಿ() ನಿಯಮಗಳಿಗೆ ವಿರುದ್ಧವಾಗಿದೆ'' ಎಂಬುದು ಪರಿಸರವಾದಿಗಳ ಅಭಿಪ್ರಾಯವಾಗಿದೆ.

ರೈತ ಸಂಘಟಕರಾದ ಪ್ರಸಾದ್ ಕುಲಕರ್ಣಿ ಈ ದಿನ.ಕಾಮ್‌ನೊಂದಿಗೆ ಮಾತನಾಡಿ, ''ಅರಣ್ಯಗಳು ನಮ್ಮ ಜೀವನಾಡಿ; ಅವುಗಳನ್ನು ಸಂರಕ್ಷಿಸುವಾಗ ಎಲ್ಲರಿಗೂ ಸಮಾನ ನೀತಿ ಅನ್ವಯವಾಗಬೇಕು. ಈ ಪ್ರಕರಣದಲ್ಲಿ ಅಧಿಕಾರಿಗಳು, ರಾಜಕೀಯ ನಾಯಕರು ಮತ್ತು ಪರಿಸರವಾದಿಗಳು ಜವಾಬ್ದಾರಿಯುತವಾಗಿ ವರ್ತಿಸುವುದು ಅಗತ್ಯವಾಗಿದೆ. ಖಾನಾಪುರದ ಅರಣ್ಯಗಳು ಮತ್ತು ಅಲ್ಲಿ ವಾಸಿಸುವ ಜನರ ಭವಿಷ್ಯ ಸಮನ್ವಯ ನೀತಿ ನಿರ್ಧಾರಗಳ ಮೇಲೆ ಅವಲಂಬಿತವಾಗಿದೆ. ಈ ಪ್ರಕರಣದ ಕುರಿತು ಚರ್ಚೆ ಮತ್ತು ತನಿಖೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ನೀಡಲಾಗುವುದು'' ಎಂದು ಹೇಳಿದರು.

''ಸಾಮಾನ್ಯ ಜನರು ಅಲ್ಲಿಯ ಪರಿಸರದಲ್ಲಿ ಓಡಾಡಲೂ ಕೂಡ ಬಿಡುವುದಿಲ್ಲ. ಆದರೆ, ಅಧಿಕಾರಸ್ಥರಿಗೆ ಎಂತಹ ಅನುಕೂಲಗಳಾದರೂ ದೊರೆಯುತ್ತವೆ. ಅನುಮತಿಗಳೂ ಸಿಗುತ್ತವೆ. ಅಲ್ಲದೆ ಅಧಿಕಾರಿಗಳ ಕುಟುಂಬಸ್ಥರೆಲ್ಲ ಕಾಡಿನೊಳಗೆ ಓಡಾಡಿಕೊಂಡು ಅಲ್ಲಿನ ಸೊಬಗನ್ನು ಅನುಭವಿಸಬಹುದು. ಆದರೆ ಸಾಮಾನ್ಯರು ಅಲ್ಲಿನ ಪರಿಸರವನ್ನು ನೋಡಬೇಕೆಂದುಕೊಂಡು ಹೋದರೆ ಅವಕಾಶ ನೀಡುವುದಿಲ್ಲ. ಅವರವರ ಅನುಕೂಲಗಳಿಗೆ ತಕ್ಕಂತೆ ರೂಲ್ಸ್ ಗಳನ್ನು ಮಾಡಿಕೊಂಡಿದ್ದಾರೆ. ಉಳ್ಳವರು ಮತ್ತು ಇಲ್ಲದವರ ನಡುವೆ ಇಬ್ಬಗೆ ನೀತಿಯನ್ನು ಅನುಸರಿಸುತ್ತಿದ್ದಾರೆ'' ಎಂದು ಆರೋಪಿಸಿದರು.

''ಉತ್ತಮ ಗುಣಮಟ್ಟದ ಸಂಪರ್ಕ ರಸ್ತೆ ಮತ್ತು ವಿದ್ಯುತ್ ವ್ಯವಸ್ಥೆಗೆ ಕೆಲವು ತಿಂಗಳ ಹಿಂದೆ ಶಿಫಾರಸು ಮಾಡಲಾಗಿತ್ತು. ಈಗ ಆ ಪ್ರಸ್ತಾವನೆಯನ್ನು ಕೆಲವು ಅವಲೋಕನಗಳೊಂದಿಗೆ ಸಂಬಂಧಿಸಿದವರಿಗೆ ಹಿಂದಿರುಗಿಸಲಾಗಿದೆ. ಜತೆಗೆ ವಿವರವಾದ ಸ್ಪಷ್ಟೀಕರಣಗಳನ್ನು ಕೋರಲಾಗಿದೆ. ಆದರೆ ರೆಸಾರ್ಟ್ ಮಾಲೀಕರ ರಾಜಕೀಯ ಸಂಬಂಧದ ಬಗ್ಗೆ ತನಗೆ ತಿಳಿದಿಲ್ಲ'' ಎಂದು ಡಿಸಿಎಫ್ ಅಧಿಕಾರಿ ಕ್ರಾಂತಿ ಎನ್.ಇ. ಪ್ರತಿಕ್ರಿಯಿಸಿದ್ದಾರೆ.

ಖಾನಾಪುರ ತಾಲೂಕು ಪಶ್ಚಿಮ ಘಟ್ಟಗಳ ಭಾಗವಾಗಿದ್ದು, ಭೀಮಗಢ ವನ್ಯಜೀವಿ ಅಭಯಾರಣ್ಯ, ಕನಕುಂಬಿ, ಜಂಬೋಟಿ ಮುಂತಾದ ಪ್ರದೇಶಗಳು ಜೈವಿಕ ವೈವಿಧ್ಯತೆಗೆ ಹೆಸರಾದವು. ಇಲ್ಲಿ ಹುಲಿ, ಚಿರತೆ, ಆನೆಗಳಂತಹ ವನ್ಯಜೀವಿಗಳು ಬಹುಸಂಖ್ಯೆಯಲ್ಲಿವೆ. ಹಾಗಾಗಿ ಹಿಂದಿನ ವರ್ಷಗಳಲ್ಲಿ ಇಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದ್ದ ಕೆಲವು ರೆಸಾರ್ಟ್‌ಗಳನ್ನು ತೆರವುಗೊಳಿಸಲಾಗಿತ್ತು. ಆದರೂ ಈಗ ಮತ್ತೆ ರೆಸಾರ್ಟ್ ಅಭಿವೃದ್ಧಿಗೆ ಅನುಮತಿ ನೀಡಿರುವುದು ಹೆಚ್ಚಿನ ಗಮನ ಸೆಳೆದಿದೆ.

ಈ ಭೂಮಿ ಅಪರೂಪ ಮತ್ತು ಸೂಕ್ಷ್ಮ ಪ್ರಭೇದಗಳನ್ನು ಹೊಂದಿರುವ ನೈಸರ್ಗಿಕ ಆವಾಸಸ್ಥಾನವಾಗಿದೆ ಎಂಬುದು ಗೊತ್ತಿದ್ದೂ ಕೂಡ ಭೂಮಿ ವರ್ಗಾವಣೆಗೆ ಶಿಫಾರಸು ನೀಡಿರುವುದರಿಂದ ಈ ಪ್ರಕರಣವು ಬೆಂಗಳೂರಿನ ಅರಣ್ಯ ಇಲಾಖೆಯ ನೋಡಲ್ ಏಜೆನ್ಸಿಯ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಅವರು ಶಿಫಾರಸು ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದು, ಹೆಚ್ಚುವರಿ ವಿವರಣೆಗಳ ಸ್ಪಷ್ಟೀಕರಣಕ್ಕೆ ಆದೇಶಿಸಿದ್ದಾರೆ.

ಇದು ಕೇವಲ ಒಂದು ರೆಸಾರ್ಟ್ ಪ್ರಕರಣವಲ್ಲ; ಅರಣ್ಯ ಭೂಮಿ ಬಳಕೆಯಲ್ಲಿ ಸಮಾನತೆ, ಪಾರದರ್ಶಕತೆ ಮತ್ತು ಪರಿಸರ ಸಂರಕ್ಷಣೆಯ ಮೇಲಿನ ಚರ್ಚೆಯನ್ನು ಹುಟ್ಟುಹಾಕಿದೆ. ಈ ವಿವಾದವು ರಾಜ್ಯದ ಅರಣ್ಯ ಪ್ರದೇಶಗಳ ಅಭಿವೃದ್ಧಿ ಮಾದರಿಯನ್ನು ಪ್ರಶ್ನಿಸುತ್ತಿದೆ. ಜನಸಾಮಾನ್ಯರ ಮೂಲಭೂತ ಅಗತ್ಯಗಳು ಮತ್ತು ಖಾಸಗಿ ವಾಣಿಜ್ಯ ಹಿತಗಳ ನಡುವಿನ ಇಬ್ಬಗೆಯ ನೀತಿಯನ್ನು ಬಯಲು ಮಾಡುತ್ತಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರ ಮತ್ತು ಅರಣ್ಯ ಇಲಾಖೆಯು ಪಾರದರ್ಶಕ ನಿರ್ಧಾರಗಳ ಮೂಲಕ ವಿಶ್ವಾಸಾರ್ಹತೆಯನ್ನು ಕಾಯ್ದುಕೊಳ್ಳುವುದು, ಪರಿಸರ ಸಂರಕ್ಷಣೆ ಮತ್ತು ಅಭಿವೃದ್ಧಿ ಎರಡೂ ಸಾಧ್ಯವಾಗುವ ಮಾರ್ಗವನ್ನು ಕಂಡುಕೊಳ್ಳುವುದು ಪ್ರಸ್ತುತ ಅಗತ್ಯವಾಗಿದೆ.

ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ.) ಹೋರಾಟಕ್ಕೆ ಸ್ಪಂದಿಸಿದ ರಾಜ್ಯ ಸರ್ಕಾರ

ಕಲ್ಯಾಣ ಸಂಜೆ ಸುದ್ದಿ

ವಿಜಯಪುರ, ಜೂ.19-

ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ.) ರಾಜ್ಯಾಧ್ಯಕ್ಷ ಅಪ್ಪು ರಾಜ್ ನಿಮಾದಾರ ಅವರ ಕರೆಗೆ ಹಾಗೂ ನಿರಂತರ ಹೋರಾಟಕ್ಕೆ ಸ್ಪಂದಿಸಿರುವ ರಾಜ್ಯ ಸರ್ಕಾರವು ಪಡಿತರ ಚೀಟಿಗೆ ಜಾತಿ ಪ್ರಮಾಣ ಪತ್ರದ (ಆರ್ ಡಿ) ಸಂಖ್ಯೆಯನ್ನು ಲಿಂಕ್ ಮಾಡುವ ಪ್ರಕ್ರಿಯೆಗೆ ಸಂಬಂಧಿಸಿದಂತೆ ಮಹತ್ವದ ಸ್ಪಷ್ಟನೆ ನೀಡಿದೆ.

ಈ ಹಿಂದೆ ಎಲ್ಲಾ ವರ್ಗದ ಪಡಿತರ ಚೀಟಿದಾರರಿಂದ ಅವರ ಜಾತಿ ಪ್ರಮಾಣ ಪತ್ರದ ಆರ್‌ಡಿ ಸಂಖ್ಯೆಯನ್ನು ಸಂಗ್ರಹಿಸಿ ದತ್ತಾಂಶ ದಲ್ಲಿ ನಮೂದಿಸಲು ಸೂಚಿಸಲಾಗಿತ್ತು. ಆದರೆ ಇಲಾಖೆಯ ಆಯುಕ್ತರಿಂದ ಬಂದಿರುವ ಇತ್ತೀಚಿನ ಪತ್ರದಲ್ಲಿ ಕೇವಲ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಪಡಿತರ ಚೀಟಿದಾರರಿಂದ ಮಾತ್ರ ಜಾತಿ



ಪ್ರಮಾಣ ಪತ್ರದ (ಆರ್ ಡಿ) ಸಂಖ್ಯೆಯನ್ನು ಸಂಗ್ರಹಿಸಿ ದತ್ತಾಂಶದಲ್ಲಿ ನಮೂದಿ ಸಲು ಸೂಚಿಸಲಾಗಿದೆ.

ಆದ್ದರಿಂದ ಸದ್ಯಕ್ಕೆ ಕೇವಲ ಎಸ್‌ಸಿ ಮತ್ತು ಎಸ್‌ಟಿ ಸಮುದಾಯಕ್ಕೆ ಸೇರಿದ ಪಡಿತರ ಚೀಟಿದಾರರಿಂದ ಮಾತ್ರ (ಆರ್ ಡಿ) ಸಂಖ್ಯೆಯನ್ನು ಸಂಗ್ರಹಿಸಿ ದತ್ತಾಂಶವನ್ನು ಕಾಲೋಚಿತಗೊಳಿಸುವಂತೆ ಜಿಲ್ಲೆಯ ಎಲ್ಲಾ ಆಹಾರ ಶಿರಸ್ತೇದಾರರು ಹಾಗೂ ಆಹಾರ ನಿರೀಕ್ಷಕರಿಗೆ ಸೂಚನೆ ನೀಡಲಾಗಿದೆ. ಅಲ್ಲದೆ, ಈ ಕುರಿತು ಸಂಬಂಧಪಟ್ಟ ನ್ಯಾಯಬೆಲೆ ಅಂಗ ಡಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡುವಂತೆ ತಿಳಿಸಲಾಗಿದೆ.

ಈ ಕ್ರಮದಿಂದ ಅರ್ಹ ಫಲಾನುಭವಿಗಳ ಮಾಹಿತಿಯನ್ನು ಸಮರ್ಪಕವಾಗಿ ದಾಖಲಿಸಿ, ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ಸೌಲಭ್ಯಗಳು ನಿಜವಾದ ಫಲಾನುಭವಿಗಳಿಗೆ ತಲುಪುವಂತೆ ಮಾಡುವ ಉದ್ದೇಶ ಹೊಂದಲಾಗಿದೆ. ಹೀಗಾಗಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಎಲ್ಲಾ ಪಡಿತರ ಚೀಟಿದಾರರು ತಮ್ಮ ಜಾತಿ ಪ್ರಮಾಣ ಪತ್ರದ (ಆರ್ ಡಿ) ಸಂಖ್ಯೆಯನ್ನು ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿಗಳಿಗೆ ಸಲ್ಲಿಸಿ ಇಲಾಖೆಯ ಕಾರ್ಯಕ್ಕೆ ಸಹಕರಿಸಬೇಕು ಎಂದು ಭೀಮ್ ರಾಜ್ಯ ದಲಿತ್ ಸೇವಾ ಸಮಿತಿ (ರಿ.) ರಾಜ್ಯಾಧ್ಯಕ್ಷ ಅಪ್ಪುರಾಜ್ ನಿಮಾದಾರ ಅವರು ಮನವಿ ಮಾಡಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR